VOLUME: 16 | 23 JULY 2026 | ಮಂಗಳವಾರ | RS: 2 | PAGE: 06 | ISSUE: 159 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ದಕ್ಷಿಣ ಭಾರತದ ಖ್ಯಾತ ನಟಿ ವರ್ಷ ಬೊಳ್ಳಮ್ಮ ಕನ್ನಡ ಸಿನಿಮಾದಲ್ಲಿ ಮೊದಲ ಬಾರಿಗೆ ನಟಿಸಿದ್ದಾರೆ. ಕನ್ನಡದವರೇ ಆಗಿರುವ ವರ್ಷ, ಕೊಡಗಿನವರು. ತಮಿಳು, ತೆಲುಗು ಹಾಗೂ ಮಲಯಾಳಂ ಭಾಷೆಗಳಲ್ಲಿ ಅನೇಕ ಯಶಸ್ವಿ ಸಿನಿಮಾಗಳಲ್ಲಿ ಅಭಿನಯಿಸಿ ತಮ್ಮದೇ ಆದ ಅಭಿಮಾನಿ ಬಳಗವನ್ನು ಗಳಿಸಿರುವ ಅವರು, ಇದೀಗ ಆಕಾಶ ಪಿಕ್ಚರ್ಸ್ ನಿರ್ಮಾಣದ "ಮಹಾನ್" ಚಿತ್ರದ ಮೂಲಕ ಕನ್ನಡ ಚಿತ್ರರಂಗಕ್ಕೆ ಪದಾರ್ಪಣೆ ಮಾಡಿದ್ದಾರೆ.



BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669

RNI KARKAN2011/44806

prabhavaa.com

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಬಿಜೆಪಿ ಶಾಸಕ ಬಿ.ಪಿ.ಹರೀಶ್‌ಗೆ ಮೊಟ್ಟೆಯಿಂದ ಹೊಡೆದ ಕೈ ಕಾರ್ಯಕರ್ತರು..!

ಬೆಂಗಳೂರು: ಹರಿಹರದ ಬಿಜೆಪಿ ಶಾಸಕ ಬಿ.ಪಿ. ಹರೀಶ್ ಅವರ ಮೇಲೆ ಕಾಂಗ್ರೆಸ್ ಕಾರ್ಯಕರ್ತರು ಮೊಟ್ಟೆ ಎಸೆದು ಹಲ್ಲೆ ನಡೆಸಿದ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಆರೋಪಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಪಕ್ಷವು ಬಿಜೆಪಿ ಕಚೇರಿ ಎದುರು ಪ್ರತಿಭಟನೆ ನಡೆಸಿತ್ತು. ಇದಕ್ಕೆ ಪ್ರತಿಯಾಗಿ ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್ ಕಚೇರಿಗೆ ಮುತ್ತಿಗೆ ಹಾಕಲು ಮುಂದಾಗಿದ್ದರು.

ಈ ಹಿನ್ನೆಲೆಯಲ್ಲಿ ಪ್ರತಿಭಟನೆ ನಡೆಯುತ್ತಿದ್ದ ಸ್ಥಳದ ಮಾಹಿತಿ ಶಾಸಕ ಬಿ.ಪಿ. ಹರೀಶ್ ಅವರ ಮೊಬೈಲ್‌ಗೆ ಕಳುಹಿಸಲಾಗಿತ್ತು ಎನ್ನಲಾಗಿದೆ.

ಈ ಮಾಹಿತಿಯ ಆಧಾರದ ಮೇಲೆ ಅವರ ಚಾಲಕ ಕ್ವೀನ್ಸ್ ರಸ್ತೆಯ ಬಳಿ ಅವರನ್ನು ಕಾರಿನಿಂದ ಇಳಿಸಿದ್ದಾರೆ. ಹರೀಶ್ ಅವರು ಕಾರಿನಿಂದ ಕೆಳಗಿಳಿಯುತ್ತಿದ್ದಂತೆ ಅಲ್ಲಿದ್ದ ಕಾಂಗ್ರೆಸ್ ಕಾರ್ಯಕರ್ತರು ಅವರನ್ನು ಸುತ್ತುವರಿದು ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಲಾಗಿದೆ. ಇದೇ ವೇಳೆ ಅವರ ಮೇಲೆ ಮೊಟ್ಟೆಗಳನ್ನು ಎಸೆದಿದ್ದಾರೆ ಎನ್ನಲಾಗಿದೆ.



ಘಟನೆ ನಡೆದ ತಕ್ಷಣ ಸ್ಥಳದಲ್ಲಿದ್ದ ಪೊಲೀಸರು ಮಧ್ಯಪ್ರವೇಶಿಸಿ ಬಿ.ಪಿ. ಹರೀಶ್ ಅವರನ್ನು ಕಾರ್ಯಕರ್ತರಿಂದ ರಕ್ಷಿಸಿ ಸುರಕ್ಷಿತವಾಗಿ ಸ್ಥಳಾಂತರಿಸಿದ್ದಾರೆ. ಘಟನೆಯ ಹಿನ್ನೆಲೆಯಲ್ಲಿ ಸ್ಥಳದಲ್ಲಿ ಕೆಲಕಾಲ ಉದ್ವಿಗ್ನ ವಾತಾವರಣ ನಿರ್ಮಾಣವಾಗಿತ್ತು.

ಘಟನೆ ಕುರಿತು ಪ್ರತಿಕ್ರಿಯಿಸಿರುವ ಶಾಸಕ ಬಿ.ಪಿ. ಹರೀಶ್, 'ನಮ್ಮ ನಾಯಕ ಆರ್. ಅಶೋಕ್ ಅವರು ಕರೆದಿದ್ದರು. ಅವರು ಇಲ್ಲಿ ಇರಬೇಕು ಎಂದುಕೊಂಡು ಚಾಲಕ ಕಾರಿನಿಂದ ಇಳಿಯುವಂತೆ ಹೇಳಿದರು. ನಾನು ಕಾರಿನಿಂದ ಇಳಿದ ಕೂಡಲೇ ಕಾಂಗ್ರೆಸ್ ಕಾರ್ಯಕರ್ತರು ಓಡಿಸಿಕೊಂಡು ಬಂದು ನನ್ನ ಮೇಲೆ ಮೊಟ್ಟೆ ಎಸೆದು, ಕೈಯಿಂದಲೂ ಹೊಡೆದರು' ಎಂದು ಆರೋಪಿಸಿದ್ದಾರೆ.

ಈ ಘಟನೆ ಇದೀಗ ಬಿಜೆಪಿ ಮತ್ತು ಕಾಂಗ್ರೆಸ್ ನಡುವೆ ಮತ್ತಷ್ಟು ರಾಜಕೀಯ ವಾಗ್ವಾದಕ್ಕೆ ಕಾರಣವಾಗುವ ಸಾಧ್ಯತೆ ಇದ್ದು, ಪೊಲೀಸರು ಘಟನೆಯ ಕುರಿತು ಪರಿಶೀಲನೆ ನಡೆಸುತ್ತಿದ್ದಾರೆ.

ಕಾಂಗ್ರೆಸ್ ಕಚೇರಿ ಎದುರು ಬಿಜೆಪಿ ನಾಯಕರ ಮೇಲೆ ನಡೆದ ಹಲ್ಲೆಯನ್ನು ಖಂಡಿಸಿ ಬಿಜೆಪಿ ನಾಯಕರು ಬೆಂಗಳೂರು ನಗರ ಪೊಲೀಸ್ ಆಯುಕ್ತರಿಗೆ ದೂರು ಸಲ್ಲಿಸಿದ್ದಾರೆ. ಹೈಗ್ರೌಂಡ್ಸ್ ಪೊಲೀಸ್ ಠಾಣೆಯಿಂದ ಪಾದಯಾತ್ರೆ ಮೂಲಕ ಪೊಲೀಸ್ ಆಯುಕ್ತರ ಕಚೇರಿಗೆ ತೆರಳಿದ ಬಿಜೆಪಿ ನಾಯಕರು, ಕಾಂಗ್ರೆಸ್ ಕಾರ್ಯಕರ್ತರು ಗೂಂಡಾಗಿರಿ ನಡೆಸಿ ತಮ್ಮ ಮೇಲೆ ಹಲ್ಲೆ ಮಾಡಿದ್ದಾರೆ ಎಂದು ಆರೋಪಿಸಿ ದೂರು ನೀಡಿದ್ದಾರೆ. ಈ ವೇಳೆ ಪೊಲೀಸ್ ಆಯುಕ್ತರ ಕಚೇರಿ ಎದುರು ಕಾಂಗ್ರೆಸ್ ವಿರುದ್ಧ ಧಿಕ್ಕಾರ ಘೋಷಣೆಗಳನ್ನು ಕೂಗಿದರು.

ಮಾಜಿ ಉಪಮುಖ್ಯಮಂತ್ರಿ ಅಶ್ವತ್ಥ್ ನಾರಾಯಣ, ಹರಿಹರ ಶಾಸಕ ಬಿ.ಪಿ. ಹರೀಶ್, ಶಾಸಕ ಸಿ.ಕೆ. ರಾಮಮೂರ್ತಿ ಹಾಗೂ ಬಿಜೆಪಿ ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್ ಸೇರಿದಂತೆ ಹಲವರ ಮೇಲೆ ಮೊಟ್ಟೆ, ದೊಣ್ಣೆ ಹಾಗೂ ಕಬ್ಬಿಣದ ರಾಡ್‌ಗಳಿಂದ ಹಲ್ಲೆ ನಡೆಸಲಾಗಿದೆ ಎಂದು ಬಿಜೆಪಿ ನಾಯಕರು ದೂರಿನಲ್ಲಿ ಆರೋಪಿಸಿದ್ದಾರೆ.

'ಹರಿಹರ ಶಾಸಕ ಬಿ.ಪಿ. ಹರೀಶ್ ಅವರ ಮೇಲೆ ಕಾಂಗ್ರೆಸ್ ಕಾರ್ಯಕರ್ತರು ಮೊಟ್ಟೆಗಳಿಂದ ಹಲ್ಲೆ ನಡೆಸಿದ್ದಾರೆ. ಅನೇಕ ಮೊಟ್ಟೆಗಳನ್ನು ಅವರ ತಲೆಗೆ ಎಸೆದು, ಅವರನ್ನು ಎತ್ತಿಕೊಂಡು ಹೋಗಲು ಪ್ರಯತ್ನಿಸಿದ್ದಾರೆ.

ನಮ್ಮನ್ನು ಬಂಧಿಸಿ ಕರೆದೊಯ್ಯುತ್ತಿದ್ದ ಬಸ್ ಮೇಲೂ ದೊಣ್ಣೆ ಹಾಗೂ ಕಬ್ಬಿಣದ ರಾಡ್‌ಗಳಿಂದ ಹಲ್ಲೆ ನಡೆಸಲಾಗಿದೆ. ಬಸ್‌ನಲ್ಲಿದ್ದ ನಮ್ಮ ಕಾರ್ಯಕರ್ತರು ಒಟ್ಟಾಗಿ ಧಿಕ್ಕಾರ ಕೂಗುತ್ತಿದ್ದ ಸಂದರ್ಭದಲ್ಲಿ ಪ್ರಶಾಂತ್ ಎಂಬ ಕಾರ್ಯಕರ್ತನ ಮೇಲೂ ರಾಡ್‌ನಿಂದ ಹಲ್ಲೆ ನಡೆಸಲಾಗಿದೆ' ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಮಾಜಿ ಉಪಮುಖ್ಯಮಂತ್ರಿ ಅಶ್ವತ್ಥ್ ನಾರಾಯಣ ಅವರ ಮೇಲೂ ಮೊಟ್ಟೆ ಎಸೆಯಲಾಗಿದ್ದು, ಶಾಸಕ ಸಿ.ಕೆ. ರಾಮಮೂರ್ತಿ ಅವರಿಗೆ ರಾಡ್‌ನಿಂದ ಹೊಡೆದಿದ್ದಾರೆ ಎಂದು ಬಿಜೆಪಿ ನಾಯಕರು ಆರೋಪಿಸಿದ್ದಾರೆ.

ಬಿಜೆಪಿ ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್ ಅವರ ಮೇಲೂ ದೊಣ್ಣೆ ಹಾಗೂ ಪೈಪ್‌ಗಳಿಂದ ಹಲ್ಲೆ ನಡೆಸಲಾಗಿದೆ. ಬಿಜೆಪಿ ಕಾರ್ಯಕರ್ತ ಪವನ್ ಮೇಲೂ ಹಲ್ಲೆ ನಡೆದಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

> ಘಟನೆ ಕುರಿತು ಪ್ರತಿಕ್ರಿಯಿಸಿರುವ ಶಾಸಕ ಬಿ.ಪಿ. ಹರೀಶ್, 'ನಮ್ಮ ನಾಯಕ ಆರ್. ಅಶೋಕ್ ಅವರು ಕರೆದಿದ್ದರು. ಅವರು ಇಲ್ಲಿ ಇರಬೇಕು ಎಂದುಕೊಂಡು ಚಾಲಕ ಕಾರಿನಿಂದ ಇಳಿಯುವಂತೆ ಹೇಳಿದರು. ನಾನು ಕಾರಿನಿಂದ ಇಳಿದ ಕೂಡಲೇ ಕಾಂಗ್ರೆಸ್ ಕಾರ್ಯಕರ್ತರು ಓಡಿಸಿಕೊಂಡು ಬಂದು ನನ್ನ ಮೇಲೆ ಮೊಟ್ಟೆ ಎಸೆದು, ಕೈಯಿಂದಲೂ ಹೊಡೆದರು' ಎಂದು ಆರೋಪಿಸಿದ್ದಾರೆ.

## ಅನಂತನಾಗ್‌ನಲ್ಲಿ ಉಗ್ರರ ಗುಂಡಿನ ದಾಳಿ

ಶ್ರೀನಗರ: ಪಹಲ್ಗಾಮ್ ದಾಳಿಯ ಬಳಿಕ ಜಮ್ಮು ಮತ್ತು ಕಾಶ್ಮೀರದಲ್ಲಿ ಉಗ್ರ ಚಟುವಟಿಕೆಗಳು ಮತ್ತೆ ತಲೆದೋರಿದ್ದು, ಬುಧವಾರ ಅನಂತನಾಗ್‌ನಲ್ಲಿ ಪೊಲೀಸರ ತಂಡದ ಮೇಲೆ ಉಗ್ರರು ಗುಂಡಿನ ದಾಳಿ ನಡೆಸಿದ್ದಾರೆ. ದಾಳಿಯಲ್ಲಿ 35 ವರ್ಷದ ಪೊಲೀಸ್ ಹೆಡ್ ಕಾನ್‌ಸ್ಟೆಬಲ್ ಆಶಿಕ್ ಹುಸೇನ್ ಕುರೇಷಿ ಹುತಾತ್ಮರಾಗಿದ್ದಾರೆ.

ಅನಂತನಾಗ್‌ನ ಲಾಲ್ ಚೌಕ್‌ನಲ್ಲಿ ಮಧ್ಯಾಹ್ನ ಸುಮಾರು 12.30ರ ವೇಳೆಗೆ ಈ ಗುಂಡಿನ ದಾಳಿ ನಡೆದಿದೆ. ಅಮರನಾಥ ಯಾತ್ರೆಯ ಭದ್ರತಾ ಕರ್ತವ್ಯಕ್ಕಾಗಿ ನಿಯೋಜಿಸಲಾಗಿದ್ದ ಪೊಲೀಸ್ ಸಿಬ್ಬಂದಿಯನ್ನು ಉಗ್ರರು ಗುರಿಯಾಗಿಸಿಕೊಂಡು ದಾಳಿ ನಡೆಸಿದ್ದಾರೆ ಎನ್ನಲಾಗಿದೆ.

ಗುಂಡಿನ ದಾಳಿಯಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ಹೆಡ್ ಕಾನ್‌ಸ್ಟೆಬಲ್ ಆಶಿಕ್ ಹುಸೇನ್ ಕುರೇಷಿ ಅವರನ್ನು ತಕ್ಷಣವೇ ಅನಂತನಾಗ್‌ನ ಸರ್ಕಾರಿ ವೈದ್ಯಕೀಯ ಕಾಲೇಜು ಆಸ್ಪತ್ರೆಗೆ ದಾಖಲಿಸಲು ಕರೆದೊಯ್ಯಲಾಯಿತು. ಆದರೆ, ಅವರನ್ನು ಪರೀಕ್ಷಿಸಿದ ವೈದ್ಯರು ಅವರು ಮೃತಪಟ್ಟಿರುವುದಾಗಿ ಘೋಷಿಸಿದ್ದಾರೆ.

ಘಟನೆ ಬಳಿಕ ಭದ್ರತಾ ಪಡೆಗಳು ಇಡೀ ಪ್ರದೇಶವನ್ನು ಸುತ್ತುವರಿದಿದ್ದು, ದಾಳಿ ನಡೆಸಿ ಪರಾರಿಯಾಗಿರುವ ಉಗ್ರರಿಗಾಗಿ ವ್ಯಾಪಕ ಶೋಧ ಕಾರ್ಯಾಚರಣೆ ಆರಂಭಿಸಿವೆ. ಉಗ್ರರ ಪತ್ತೆಗೆ ಭದ್ರತಾ ಪಡೆಗಳು ತೀವ್ರ ಶೋಧ ನಡೆಸುತ್ತಿದ್ದು, ಪ್ರದೇಶದಲ್ಲಿ ಕಟ್ಟೆಚ್ಚರ ವಹಿಸಲಾಗಿದೆ.




ದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ನಿವಾಸಕ್ಕೆ ಮುತ್ತಿಗೆ ಹಾಕಿದ್ದ ಕಾಂಗ್ರೆಸ್ ವಿರುದ್ಧ ಪ್ರತಿಪಕ್ಷ ನಾಯಕ ಆರ್. ಅಶೋಕ್ ಮತ್ತು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರ ನೇತೃತ್ವದಲ್ಲಿ ಬಿಜೆಪಿ ಶಾಸಕರು, ಪದಾಧಿಕಾರಿಗಳು ಬೆಂಗಳೂರಿನ ಕೆಪಿಸಿಸಿ ಕಚೇರಿಗೆ ಮುತ್ತಿಗೆ ಹಾಕಿ ರಾಷ್ಟ್ರವಿರೋಧಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಪ್ರತಿಭಟಿಸಿದರು. ಈ ಸಂದರ್ಭದಲ್ಲಿ ಮಾಜಿ ಉಪಮುಖ್ಯಮಂತ್ರಿಗಳಾದ ಡಾ.ಸಿ.ಎನ್.ಅಶ್ವತ್ಥ್ ನಾರಾಯಣ್, ಶಾಸಕ ಎಸ್.ಆರ್.ವಿಶ್ವನಾಥ್ ಸೇರಿದಂತೆ ಹಲವರಿದ್ದರು.

# 13 ಸಾವಿರ ಮಂದಿ ಗುಳೆ?

ವಿಜಯನಗರ: ಮುಂಗಾರು ಮಳೆ ಕೈಕೊಟ್ಟಿರುವ ಪರಿಣಾಮ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಬರದ ಆತಂಕ ಮತ್ತಷ್ಟು ಗಂಭೀರವಾಗಿದ್ದು, ಜನರು ಬದುಕು ಕಟ್ಟಿಕೊಳ್ಳಲು ಕುಟುಂಬ ಸಮೇತರಾಗಿ ಅನ್ಯ ಜಿಲ್ಲೆ ಹಾಗೂ ರಾಜ್ಯಗಳತ್ತ ಗುಳೆ ಹೊರಡುತ್ತಿದ್ದಾರೆ.

ಜಿಲ್ಲೆಯ ನೂರಾರು ತಾಂಡಾ ಹಾಗೂ ಗ್ರಾಮಗಳಿಂದ ಸಾವಿರಾರು ಮಂದಿ ತಂಡೋಪತಂಡವಾಗಿ ಊರು ತೊರೆಯುತ್ತಿರುವ ದೃಶ್ಯಗಳು ಕಂಡುಬರುತ್ತಿದ್ದು, ಇದು ಈ ಭಾಗದಲ್ಲಿ ಉಂಟಾಗಿರುವ ಭೀಕರ ಬರ ಪರಿಸ್ಥಿತಿಗೆ ಸಾಕ್ಷಿಯಾಗಿದೆ.

ಮಳೆ ಇಲ್ಲದೆ ಕೃಷಿ ಚಟುವಟಿಕೆಗಳು ಸಂಪೂರ್ಣ ಕುಂಠಿತಗೊಂಡಿದ್ದು, ಹಲವು ಕಡೆ ಇದುವರೆಗೂ ಬಿತ್ತನೆ ಕಾರ್ಯವೂ ಆರಂಭವಾಗಿಲ್ಲ. ಹೀಗಾಗಿ ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗದ ಕೊರತೆ ಎದುರಾಗಿದ್ದು, ಹೊಟ್ಟೆಪಾಡಿಗಾಗಿ ಜನರು ಬೆಂಗಳೂರು, ಗೋವಾ, ಮಹಾರಾಷ್ಟ್ರ ಸೇರಿದಂತೆ ವಿವಿಧ ಪ್ರದೇಶಗಳತ್ತ ಉದ್ಯೋಗ ಅರಸಿ ತೆರಳುತ್ತಿದ್ದಾರೆ.

ಮನೆಗಳಲ್ಲಿ ವೃದ್ಧರು ಹಾಗೂ ಚಿಕ್ಕ ಮಕ್ಕಳನ್ನು ಉಳಿಸಿಕೊಂಡು, ದುಡಿಯುವ ಸಾಮರ್ಥ್ಯ ಹೊಂದಿರುವ ಬಹುತೇಕರು ಗುಳೆ ಹೊರಡುತ್ತಿರುವ ಪರಿಸ್ಥಿತಿ ನಿರ್ಮಾಣವಾಗಿದೆ.

ಬರದ ಪರಿಣಾಮ ತಾಂಡಾಗಳಿಂದಲೇ ಹೆಚ್ಚಿನ ಸಂಖ್ಯೆಯಲ್ಲಿ ಜನರು ಗುಳೆ ಹೊರಡುತ್ತಿದ್ದಾರೆ ಎನ್ನಲಾಗಿದೆ. ಸ್ಥಳೀಯರ ಪ್ರಕಾರ, ಬಳ್ಳಾರಿ ಜಿಲ್ಲೆಯ ಸುಮಾರು 20 ತಾಂಡಾಗಳಿಂದ 3 ಸಾವಿರಕ್ಕೂ ಅಧಿಕ ಮಂದಿ ಹಾಗೂ ವಿಜಯನಗರ ಜಿಲ್ಲೆಯ ಸುಮಾರು 120 ತಾಂಡಾಗಳಿಂದ 10 ಸಾವಿರಕ್ಕೂ ಹೆಚ್ಚು ಜನರು ಈಗಾಗಲೇ ಊರು ತೊರೆದಿದ್ದಾರೆ ಎನ್ನಲಾಗುತ್ತಿದೆ. ಬೆಂಗಳೂರು, ಗೋವಾ, ಮಹಾರಾಷ್ಟ್ರ ಸೇರಿದಂತೆ ವಿವಿಧೆಡೆ ಕೂಲಿ ಕೆಲಸ ಹಾಗೂ ಉದ್ಯೋಗ ಅರಸಿ ಕುಟುಂಬಗಳು ತೆರಳುತ್ತಿವೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಆದರೆ, ಈ ಕುರಿತು ಜಿಲ್ಲಾಡಳಿತ ಅಥವಾ ಸಂಬಂಧಪಟ್ಟ ಅಧಿಕಾರಿಗಳು ಯಾವುದೇ ಅಧಿಕೃತ ಅಂಕಿ–ಅಂಶಗಳನ್ನು ಇನ್ನೂ ಬಿಡುಗಡೆ ಮಾಡಿಲ್ಲ. ಹೀಗಾಗಿ ಗುಳೆ ಹೋದವರ ನಿಖರ ಸಂಖ್ಯೆ ಎಷ್ಟಿದೆ ಎಂಬುದು ಸ್ಪಷ್ಟವಾಗಿಲ್ಲ.

# ಸಂಪುಟ ವಿಸ್ತರಣೆ ಮತ್ತೆ ಮುಂದಕ್ಕೆ

ನವದೆಹಲಿ: ರಾಜ್ಯ ಸಚಿವ ಸಂಪುಟ ವಿಸ್ತರಣೆ ಮತ್ತೆ ಒಂದು ವಾರ ಮುಂದೂಡಿಕೆಯಾಗಿದೆ. ಇಂದು ನಡೆಯಬೇಕಿದ್ದ ನೂತನ ಸಚಿವರ ಪ್ರಮಾಣ ವಚನ ಕಾರ್ಯಕ್ರಮ ರದ್ದಾಗಿದ್ದು, ಇದೇ ಶನಿವಾರ ಅಥವಾ ಭಾನುವಾರದೊಳಗೆ ಸಚಿವರ ಪಟ್ಟಿಯನ್ನು ಅಂತಿಮಗೊಳಿಸುವ ಸಾಧ್ಯತೆ ಇದೆ. ಎಲ್ಲವೂ ಅಂದುಕೊಂಡಂತೆ ನಡೆದರೆ ಮುಂದಿನ ಬುಧವಾರದೊಳಗೆ ನೂತನ ಸಚಿವರ ಪ್ರಮಾಣ ವಚನ ನಡೆಯುವ ಸಾಧ್ಯತೆ ಹೆಚ್ಚಿದೆ. ಈ ನಡುವೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು 'ಮೂರು ಡಿಸಿಎಂ' ಪ್ರಸ್ತಾಪವನ್ನು ಮುಂದಿಟ್ಟಿದ್ದಾರೆ ಎನ್ನಲಾಗಿದ್ದು, ರಾಜ್ಯ ಕಾಂಗ್ರೆಸ್ ರಾಜಕಾರಣದಲ್ಲಿ ಹೊಸ ಚರ್ಚೆ ಹುಟ್ಟುಹಾಕಿದೆ.

ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅವರು ಅಧಿಕಾರ ವಹಿಸಿಕೊಂಡು ಎರಡು ತಿಂಗಳು ಸಮೀಪಿಸುತ್ತಿದ್ದರೂ ಸಚಿವ ಸಂಪುಟ ವಿಸ್ತರಣೆಗೆ ಪದೇಪದೆ ಅಡೆತಡೆಗಳು ಎದುರಾಗುತ್ತಿವೆ. ಕಳೆದ ವಾರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಅಲಭ್ಯತೆಯಿಂದಾಗಿ ವಿಳಂಬವಾಗಿದ್ದರೆ, ಈ ವಾರ ದೆಹಲಿಯಲ್ಲಿ ನಡೆದ ನೀಟ್ ಪ್ರತಿಭಟನೆ ಹಿನ್ನೆಲೆಯಲ್ಲಿ ಸಂಪುಟ ವಿಸ್ತರಣೆ ಮತ್ತಷ್ಟು ಮುಂದೂಡಿಕೆಯಾಗಿದೆ. ಇಂದು ಪ್ರಮಾಣ ವಚನ ನಡೆಯಲಿದೆ ಎಂದು ನಿರೀಕ್ಷಿಸಲಾಗಿತ್ತು. ಇದಕ್ಕಾಗಿ ನಿನ್ನೆಯಷ್ಟೇ ರಾಜಭವನದಲ್ಲೂ ಸಿದ್ಧತೆ ನಡೆದಿತ್ತು ಎನ್ನಲಾಗಿದೆ.

> ಆಗಸ್ಟ್ 6ರಿಂದ ವಿಧಾನಮಂಡಲದ ಅಧಿವೇಶನ ಆರಂಭವಾಗಲಿರುವ ಹಿನ್ನೆಲೆಯಲ್ಲಿ ಅದಕ್ಕೂ ಮುನ್ನವೇ ಸಚಿವ ಸಂಪುಟ ವಿಸ್ತರಣೆ ಪೂರ್ಣಗೊಳಿಸುವ ಸಾಧ್ಯತೆ ಇದೆ. ಹೀಗಾಗಿ ಮುಂದಿನ ವಾರ ಬುಧವಾರದೊಳಗೆ ನೂತನ ಸಚಿವರ ಪ್ರಮಾಣ ವಚನ ಕಾರ್ಯಕ್ರಮ ನಡೆಯಬಹುದು ಎಂದು ಕಾಂಗ್ರೆಸ್ ವಲಯದಲ್ಲಿ ನಿರೀಕ್ಷಿಸಲಾಗಿದೆ.

ಇದೀಗ ಶನಿವಾರ ಅಥವಾ ಭಾನುವಾರದಂದು ಸಚಿವರ ಪಟ್ಟಿಯನ್ನು ಅಂತಿಮಗೊಳಿಸುವ ಸಾಧ್ಯತೆ ಇದೆ. ಸಚಿವ ಸಂಪುಟ ವಿಸ್ತರಣೆಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ನಿರ್ಧಾರವೇ ಅಂತಿಮವಾಗಲಿದೆ ಎನ್ನಲಾಗಿದ್ದು, ರಾಜ್ಯದ ರಾಜಕೀಯ ಬೆಳವಣಿಗೆಗಳ ಕುರಿತು ಅವರ ಬಳಿ ಅಗತ್ಯವಿರುವ ಎಲ್ಲ ವರದಿಗಳಿವೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಈಗಾಗಲೇ ಸಂದೇಶ ನೀಡಿದ್ದಾರೆ ಎನ್ನಲಾಗಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೀಡಿರುವ ಪಟ್ಟಿಯಲ್ಲಿರುವ ಎಷ್ಟು ಮಂದಿಗೆ ಸಚಿವ ಸ್ಥಾನ ದೊರೆಯಲಿದೆ ಎಂಬುದು ಕುತೂಹಲ ಮೂಡಿಸಿದೆ.

ಆಗಸ್ಟ್ 6ರಿಂದ ವಿಧಾನಮಂಡಲದ ಅಧಿವೇಶನ ಆರಂಭವಾಗಲಿರುವ ಹಿನ್ನೆಲೆಯಲ್ಲಿ ಅದಕ್ಕೂ ಮುನ್ನವೇ ಸಚಿವ ಸಂಪುಟ ವಿಸ್ತರಣೆ ಪೂರ್ಣಗೊಳಿಸುವ ಸಾಧ್ಯತೆ ಇದೆ. ಹೀಗಾಗಿ ಮುಂದಿನ ವಾರ ಬುಧವಾರದೊಳಗೆ ನೂತನ ಸಚಿವರ ಪ್ರಮಾಣ ವಚನ ಕಾರ್ಯಕ್ರಮ ನಡೆಯಬಹುದು ಎಂದು ಕಾಂಗ್ರೆಸ್ ವಲಯದಲ್ಲಿ ನಿರೀಕ್ಷಿಸಲಾಗಿದೆ.

ಮಾಹಿತಿಗಳ ಪ್ರಕಾರ, ಲಿಂಗಾಯತ ಸಮುದಾಯದಿಂದ ಎಂ.ಬಿ. ಪಾಟೀಲ್ ಹಾಗೂ ಪರಿಶಿಷ್ಟ ಪಂಗಡ ಸಮುದಾಯದಿಂದ ಸತೀಶ್ ಜಾರಕಿಹೊಳಿ ಅವರನ್ನು ಉಪಮುಖ್ಯಮಂತ್ರಿಗಳನ್ನಾಗಿ ಮಾಡುವ ಪ್ರಸ್ತಾಪವನ್ನು ಹೈಕಮಾಂಡ್ ಮುಂದೆ ಇಡಲಾಗಿದೆ ಎನ್ನಲಾಗಿದೆ. ಮತ್ತೊಂದೆಡೆ, ಈ ಹಿಂದೆ ಸಿದ್ದರಾಮಯ್ಯ ಅವರ ಪರವಾಗಿ ನಿಂತಿದ್ದ ಕೆಲವು ನಾಯಕರ ವಿಚಾರದಲ್ಲೂ ಡಿ.ಕೆ. ಶಿವಕುಮಾರ್ ಅವರ ನಿಲುವಿನಲ್ಲಿ ಬದಲಾವಣೆ ಕಂಡುಬಂದಿದೆ ಎನ್ನಲಾಗುತ್ತಿದೆ.

ಸಚಿವರಾದ ಕೆ.ಎನ್. ರಾಜಣ್ಣ ಹಾಗೂ ಜಮೀರ್ ಅಹ್ಮದ್ ಖಾನ್ ಅವರ ಪರವಾಗಿ ಡಿಕೆಶಿ ಒಲವು ತೋರಿದ್ದಾರೆ ಎಂಬ ಚರ್ಚೆಯೂ ಕಾಂಗ್ರೆಸ್ ವಲಯದಲ್ಲಿ ನಡೆಯುತ್ತಿದೆ.

ಒಟ್ಟಿನಲ್ಲಿ ಮುಂದಿನ ವಾರ ಸಚಿವ ಸಂಪುಟ ವಿಸ್ತರಣೆಗೆ ಸಂಬಂಧಿಸಿದ ಕುತೂಹಲಕ್ಕೆ ತೆರೆ ಬೀಳುವ ಸಾಧ್ಯತೆ ಇದೆ. ಇದರೊಂದಿಗೆ ಡಿ.ಕೆ. ಶಿವಕುಮಾರ್ ಅವರ 'ಮೂರು ಡಿಸಿಎಂ' ಸೂತ್ರ ಜಾರಿಗೆ ಬರುತ್ತದೆಯೇ ಎಂಬುದೂ ಸ್ಪಷ್ಟವಾಗಲಿದೆ. ಇದು ಮುಂದಿನ ಏಳು ವರ್ಷಗಳ ಕಾಲ ಮುಖ್ಯಮಂತ್ರಿ ಸ್ಥಾನದಲ್ಲಿ ಮುಂದುವರಿಯುವ ಅವರ ರಾಜಕೀಯ ಲೆಕ್ಕಾಚಾರದ ಭಾಗವೇ ಅಥವಾ ಭವಿಷ್ಯದ ನಾಯಕತ್ವಕ್ಕಾಗಿ ರೂಪಿಸಿರುವ ದೊಡ್ಡ ರಾಜಕೀಯ ಯೋಜನೆಯೇ ಎಂಬುದು ಕಾಂಗ್ರೆಸ್ ಹೈಕಮಾಂಡ್‌ನ ಅಂತಿಮ ನಿರ್ಧಾರದ ಬಳಿಕವಷ್ಟೇ ಸ್ಪಷ್ಟವಾಗಲಿದೆ.

# 'ಪ್ರವಾಸೋದ್ಯಮ ಇಲಾಖೆ ಹೋಟೆಲ್‌ಗಳ ಉನ್ನತೀಕರಣಕ್ಕೆ ಸರ್ಕಾರದ ನಿರ್ಧಾರ'

ಬೆಂಗಳೂರು: ರಾಜ್ಯದ ಪ್ರವಾಸೋದ್ಯಮ ಮೂಲ ಸೌಕರ್ಯವನ್ನು ಜಾಗತಿಕ ಗುಣಮಟ್ಟಕ್ಕೆ ಏರಿಸುವ ಉದ್ದೇಶದಿಂದ, ಕರ್ನಾಟಕ ಪ್ರವಾಸೋದ್ಯಮ ಇಲಾಖೆ ವ್ಯಾಪ್ತಿಯಲ್ಲಿರುವ ಮಯೂರ ಹೋಟೆಲ್‌ಗಳು ಹಾಗೂ ಇತರೆ ಆತಿಥ್ಯ ಕೇಂದ್ರಗಳನ್ನು ಖಾಸಗಿ ಆತಿಥ್ಯ ಕ್ಷೇತ್ರದ ಪರಿಣತಿ ಮತ್ತು ಅತ್ಯುತ್ತಮ ನಿರ್ವಹಣಾ ಪದ್ಧತಿಗಳನ್ನು ಅಳವಡಿಸಿಕೊಂಡು ಹಂತ ಹಂತವಾಗಿ ಉನ್ನತೀಕರಿಸಲಾಗುವುದು ಎಂದು ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.

ಅವರು ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿಗಿರಿಧಾಮದಲ್ಲಿ ಕೆಎಸ್‌ಟಿಡಿಸಿಯಿಂದ ನಿರ್ಮಿಸಲಾದ ನೂತನ 'ಮಯೂರ ಸನ್‌ರೈಸ್ ರೆಸ್ಟೋರೆಂಟ್' ಉದ್ಘಾಟಿಸಿ ಮಾತನಾಡಿದರು.

ರಾಜ್ಯದ ಅತ್ಯಂತ ಸುಂದರ ಹಾಗೂ ಪ್ರಮುಖ ಪ್ರವಾಸಿ ತಾಣಗಳಲ್ಲಿ ಕೆಎಸ್‌ಟಿಡಿಸಿ ಹಾಗೂ ಜಂಗಲ್ ಲಾಡ್ಜ್‌ಸ್ ಅಂಡ್ ರೆಸಾರ್ಟ್ಸ್ ಆಸ್ತಿಗಳಿದ್ದರೂ, ಅವುಗಳ ಸಂಪೂರ್ಣ ಸಾಮರ್ಥ್ಯವನ್ನು ಬಳಸಿಕೊಳ್ಳುವ ಅಗತ್ಯವಿದೆ. ಉತ್ತಮ ನಿರ್ವಹಣೆ, ಆಧುನಿಕ ಸೌಲಭ್ಯಗಳು, ವೃತ್ತಿಪರ ಆತಿಥ್ಯ ಸೇವೆಗಳು ಹಾಗೂ ಅಂತರರಾಷ್ಟ್ರೀಯ ಮಟ್ಟದ ಕಾರ್ಯಾಚರಣಾ ಪದ್ಧತಿಗಳನ್ನು ಅಳವಡಿಸುವ ಮೂಲಕ ಈ ಆಸ್ತಿಗಳಿಗೆ ಹೊಸ ಮೆರುಗು ನೀಡಲಾಗುವುದು ಎಂದು ಸಚಿವರು ಹೇಳಿದರು.



ಚಿಕ್ಕಮಗಳೂರಿನಲ್ಲಿ ಪ್ರವಾಸೋದ್ಯಮ ಇಲಾಖೆ ಮತ್ತು ತಾಜ್ ಸಂಸ್ಥೆಯ ಸಹಯೋಗದ ಅನುಭವವು ಸರ್ಕಾರಿ ಆತಿಥ್ಯ ಕ್ಷೇತ್ರದಲ್ಲಿ ವೃತ್ತಿಪರ ನಿರ್ವಹಣೆಯ ಮಹತ್ವವನ್ನು ತೋರಿಸಿದೆ. ಇದೇ ಅನುಭವದ ಆಧಾರದ ಮೇಲೆ ರಾಜ್ಯದ ಇತರೆ ಪ್ರಮುಖ ಪ್ರವಾಸಿ ತಾಣಗಳಲ್ಲಿರುವ ಮಯೂರ ಹೋಟೆಲ್‌ಗಳು ಮತ್ತು ಪ್ರವಾಸೋದ್ಯಮ ಇಲಾಖೆಯ ಆಸ್ತಿಗಳಲ್ಲಿ ಖಾಸಗಿ ಆತಿಥ್ಯ ಕ್ಷೇತ್ರದ ಅತ್ಯುತ್ತಮ ಕಾರ್ಯಪದ್ಧತಿಗಳನ್ನು ಅಳವಡಿಸಿಕೊಳ್ಳಲಾಗುವುದು ಎಂದು ಅವರು ತಿಳಿಸಿದರು.

"ಪ್ರೀಮಿಯಂ ಆತಿಥ್ಯ ಸೇವೆಗಳು ಕೇವಲ ಐಷಾರಾಮಿ ಪ್ರವಾಸಿಗರಿಗೆ ಮಾತ್ರ ಸೀಮಿತವಾಗಬಾರದು. ಉತ್ತಮ ಗುಣಮಟ್ಟದ ವಸತಿ, ಆಹಾರ ಹಾಗೂ ಸೇವೆಗಳು ಮಧ್ಯಮ ವರ್ಗದ ಕುಟುಂಬಗಳಿಗೂ ಕೈಗೆಟಕುವ ದರದಲ್ಲಿ ದೊರೆಯಬೇಕು. ಪ್ರವಾಸೋದ್ಯಮವನ್ನು ಜನಸ್ನೇಹಿಯಾಗಿ ಹಾಗೂ ಎಲ್ಲರಿಗೂ ಲಭ್ಯವಾಗುವಂತೆ ರೂಪಿಸುವುದು ನಮ್ಮ ಸರ್ಕಾರದ ಆದ್ಯತೆಯಾಗಿದೆ," ಎಂದು ಸಚಿವರು ಹೇಳಿದರು.

ಮಯೂರ ಹೋಟೆಲ್‌ಗಳ ಉನ್ನತೀಕರಣಕ್ಕೆ ಸಂಬಂಧಿಸಿದಂತೆ ದೇಶದ ಪ್ರಮುಖ ಹೋಟೆಲ್ ಉದ್ಯಮಿಗಳು, ಆತಿಥ್ಯ ಕ್ಷೇತ್ರದ ಪರಿಣಿತರು ಹಾಗೂ ಪ್ರವಾಸೋದ್ಯಮ ತಜ್ಞರನ್ನು ಒಳಗೊಂಡ ಸಲಹಾ ಸಮಿತಿಯನ್ನು ರಚಿಸಲಾಗುವುದು ಎಂದರು.

ಈ ಸಮಿತಿಯ ಶಿಫಾರಸುಗಳ ಆಧಾರದ ಮೇಲೆ ಮಯೂರ ಹೋಟೆಲ್‌ಗಳ ವಿನ್ಯಾಸ, ಕೊಠಡಿ ಸೌಲಭ್ಯಗಳು, ಆಹಾರ ಸೇವೆ, ಕಾರ್ಯಾಚರಣೆ, ಅತಿಥಿ ಸೇವೆ ಹಾಗೂ ನಿರ್ವಹಣಾ ಗುಣಮಟ್ಟವನ್ನು ಹಂತ ಹಂತವಾಗಿ ಉನ್ನತೀಕರಿಸಲಾಗುವುದು. ಹೋಟೆಲ್‌ಗಳ ಮಾಲೀಕತ್ವ ಸರ್ಕಾರದ ಬಳಿಯೇ ಮುಂದುವರಿಯಲಿದ್ದು, ಖಾಸಗಿ ಆತಿಥ್ಯ ಕ್ಷೇತ್ರದ ಪರಿಣತಿಯನ್ನು ಮಾತ್ರ ಬಳಸಿಕೊಳ್ಳಲಾಗುವುದು ಎಂದು ಅವರು ಸ್ಪಷ್ಟಪಡಿಸಿದರು.

ನಂದಿಬೆಟ್ಟದಲ್ಲಿ ಹೆಚ್ಚುತ್ತಿರುವ ವಾಹನ ದಟ್ಟಣೆ ಕುರಿತು ಮಾತನಾಡಿದ ಸಚಿವರು, ವಾರಾಂತ್ಯ ಹಾಗೂ ರಜಾ ದಿನಗಳಲ್ಲಿ ಬೆಟ್ಟದ ಮೇಲ್ಭಾಗಕ್ಕೆ ಖಾಸಗಿ ವಾಹನಗಳ ಪ್ರವೇಶವನ್ನು ನಿಯಂತ್ರಿಸಿ, ಕೆಳಭಾಗದಲ್ಲಿಯೇ ಸುಸಜ್ಜಿತ ಪಾರ್ಕಿಂಗ್ ವ್ಯವಸ್ಥೆ ಅಭಿವೃದ್ಧಿಪಡಿಸಲು ಸರ್ಕಾರ ಯೋಜನೆ ರೂಪಿಸುತ್ತಿದೆ ಎಂದು ಹೇಳಿದರು.

ಪ್ರವಾಸಿ ತಾಣಗಳಲ್ಲಿ ಸ್ವಚ್ಛತೆ, ಗುಣಮಟ್ಟದ ಸೇವೆ ಹಾಗೂ ಪ್ರವಾಸಿಗರೊಂದಿಗೆ ಸೌಜನ್ಯದ ವರ್ತನೆಗೆ ಅತ್ಯುನ್ನತ ಆದ್ಯತೆ ನೀಡಬೇಕು. 'ಅತಿಥಿ ದೇವೋ ಭವ' ಎಂಬ ಭಾರತೀಯ ಆತಿಥ್ಯ ಸಂಸ್ಕೃತಿಯೇ ನಮ್ಮ ಸೇವೆಯ ಮೂಲಮಂತ್ರವಾಗಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಡಾ. ವಿ. ರಾಮ್ ಪ್ರಸಾತ್ ಮನೋಹರ್ ಮಾತನಾಡಿ, ಸರ್ಕಾರಿ ಆತಿಥ್ಯ ಕ್ಷೇತ್ರದ ಗುರುತನ್ನು ಉಳಿಸಿಕೊಂಡೇ, ಖಾಸಗಿ ಆತಿಥ್ಯ ಕ್ಷೇತ್ರದ ಪರಿಣತಿ, ಸೇವಾ ಗುಣಮಟ್ಟ ಹಾಗೂ ನಿರ್ವಹಣಾ ಕಾರ್ಯಪದ್ಧತಿಗಳನ್ನು ಅಳವಡಿಸಿಕೊಂಡು ಮಯೂರ ಹೋಟೆಲ್‌ಗಳನ್ನು ಹೊಸ ಮಟ್ಟಕ್ಕೆ ಕೊಂಡೊಯ್ಯುವ ಗುರಿಯನ್ನು ಇಲಾಖೆ ಹೊಂದಿದೆ ಎಂದು ತಿಳಿಸಿದರು.

ನಂದಿಬೆಟ್ಟ ರೋಪ್‌ವೇ ಯೋಜನೆ ಇಲಾಖೆಯ ಪ್ರಮುಖ ಆದ್ಯತೆಗಳಲ್ಲಿ ಒಂದಾಗಿದೆ. ಯೋಜನೆಗೆ ಅಗತ್ಯವಿರುವ ಅರಣ್ಯ ಇಲಾಖೆಯ ಅನುಮತಿ ಪಡೆಯುವ ಪ್ರಕ್ರಿಯೆಯನ್ನು ವೇಗಗೊಳಿಸಲಾಗಿದ್ದು, ಸಚಿವರ ನಿರ್ದೇಶನದಂತೆ ದೆಹಲಿಯಲ್ಲಿ ವಿಶೇಷ ಸಮನ್ವಯ ವ್ಯವಸ್ಥೆ ರೂಪಿಸಲಾಗಿದೆ. ಅಗತ್ಯ ಅನುಮತಿಗಳನ್ನು ಶೀಘ್ರದಲ್ಲೇ ಪಡೆದು ಯೋಜನೆಯನ್ನು ಅನುಷ್ಠಾನದ ಹಂತಕ್ಕೆ ತರಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ. ಶ್ರೀನಿವಾಸ್, ಕೆಎಸ್‌ಟಿಡಿಸಿ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಪ್ರವಾಸೋದ್ಯಮ ಇಲಾಖೆ ಆಯುಕ್ತ ಶಿವಪ್ರಸಾದ್ ಪಿ.ಆರ್. ಸೇರಿದಂತೆ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

2 | 3S ಭಾರತ ಸಾರಥಿ | 23/07/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಸಸಿ ನೆಟ್ಟು ರವಿಶೆಟ್ಟಿ ಬೈಂದೂರ್ ಹುಟ್ಟುಹಬ್ಬ ಆಚರಣೆ; ಶುಭ ಕೋರಿದ ಗಣ್ಯರು

ಬೆಂಗಳೂರು: ಕನ್ನಡಪರ ಹೋರಾಟಗಾರ ಹಾಗೂ ಕಾರ್ಮಿಕರ ಪರ ಧ್ವನಿಯಾಗಿರುವ ರವಿಶೆಟ್ಟಿ ಬೈಂದೂರ್ ಅವರ ಜನ್ಮದಿನವನ್ನು ಅಭಿಮಾನಿಗಳು ಹಾಗೂ ಕಾರ್ಯಕರ್ತರು ಫ್ರೀಡಂ ಪಾರ್ಕ್‌ನಲ್ಲಿ ಸಸಿ ನೆಡುವ ಮೂಲಕ ಅರ್ಥಪೂರ್ಣವಾಗಿ ಆಚರಿಸಿದರು.

ಬಳಿಕ ರಾಜಾಜಿನಗರದ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳ ಗಣ್ಯರು, ಹೋರಾಟಗಾರರು ಹಾಗೂ ಅಭಿಮಾನಿಗಳು ಅವರಿಗೆ ಶುಭಾಶಯ ಕೋರಿದರು.

ಈ ಸಂದರ್ಭದಲ್ಲಿ ಶ್ರೀ ಮಹರ್ಷಿ ಆನಂದ ಗುರೂಜಿ ಮಾತನಾಡಿ, ನಾಡು, ನುಡಿ, ನೆಲ ಮತ್ತು ಭಾಷೆಯ ಉಳಿವಿಗಾಗಿ ನಿರಂತರವಾಗಿ ಹೋರಾಟ ನಡೆಸುತ್ತಿರುವ ರವಿಶೆಟ್ಟಿ ಬೈಂದೂರ್ ಅವರು ಸಮಾಜಮುಖಿ ಚಿಂತನೆ, ಜನಪರ ಕಾಳಜಿ ಹಾಗೂ ಕಾರ್ಮಿಕರ ಪರ ಹೋರಾಟಗಳಿಂದ ವಿಶಿಷ್ಟ ಗುರುತನ್ನು ಗಳಿಸಿದ್ದಾರೆ. ಹಗಲು-ರಾತ್ರಿ ಎನ್ನದೆ ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸುತ್ತಾ, ಬೀದಿ ಬದಿ ವ್ಯಾಪಾರಿಗಳು, ಬೇಕರಿ ಮಾಲೀಕರು ಹಾಗೂ ವಿವಿಧ ಕ್ಷೇತ್ರಗಳ ಕಾರ್ಮಿಕರ ಹಕ್ಕುಗಳ ರಕ್ಷಣೆಗಾಗಿ ಅವರು ಸಲ್ಲಿಸುತ್ತಿರುವ ಸೇವೆ ಶ್ಲಾಘನೀಯ ಎಂದು ಹೇಳಿದರು.





ಹಿರಿಯ ಹೋರಾಟಗಾರ ಗಂಡಸಿ ಸದಾನಂದ ಸ್ವಾಮಿ ಮಾತನಾಡಿ, ಸಮಾಜದ ಶೋಷಿತ ವರ್ಗಗಳಿಗೆ ನ್ಯಾಯ ದೊರಕಿಸಿಕೊಡುವ ನಿಟ್ಟಿನಲ್ಲಿ ರವಿಶೆಟ್ಟಿ ಬೈಂದೂರ್ ನಡೆಸುತ್ತಿರುವ ಹೋರಾಟ ಅನೇಕರಿಗೆ ಸ್ಫೂರ್ತಿದಾಯಕವಾಗಿದೆ. ಕನ್ನಡದ ಅಸ್ಮಿತೆ, ಭಾಷೆಯ ಗೌರವ ಹಾಗೂ ರಾಜ್ಯದ ಹಿತಾಸಕ್ತಿಗಾಗಿ ಅವರು ಕೈಗೊಂಡಿರುವ ಹೋರಾಟಗಳು ಜನಮೆಚ್ಚುಗೆಗೆ ಪಾತ್ರವಾಗಿದ್ದು, ಸಾಮಾಜಿಕ ನ್ಯಾಯ, ಸಮಾನತೆ ಹಾಗೂ ಜನಪರ ಮೌಲ್ಯಗಳನ್ನು ಎತ್ತಿಹಿಡಿಯುವ ಅವರ ಕಾರ್ಯಚಟುವಟಿಕೆಗಳು ಮುಂದಿನ ಪೀಳಿಗೆಗೆ ಮಾದರಿಯಾಗಿವೆ ಎಂದು ತಿಳಿಸಿದರು.





ಗಾಯಕ, ಹಿರಿಯ ನಟ ಶಶಿಧರ್ ಕೋಟೆ ಮಾತನಾಡಿ, ರವಿಶೆಟ್ಟಿ ಬೈಂದೂರ್ ಅವರಿಗೆ ಉತ್ತಮ ಆರೋಗ್ಯ, ದೀರ್ಘಾಯುಷ್ಯ, ಸುಖ, ಸಂತೋಷ ಹಾಗೂ ಸಮಾಜಸೇವೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಮುಂದುವರಿಸುವ ಶಕ್ತಿ ಮತ್ತು ಸಾಮರ್ಥ್ಯ ದೊರೆಯಲಿ ಎಂದು ಶುಭ ಹಾರೈಸಿದರು. ಹುಟ್ಟುಹಬ್ಬಕ್ಕೆ ಆಗಮಿಸಿದ್ದ ಉದ್ಯಮಿ ಉದಯ್ ಜಿ ಶೆಟ್ಟಿ, ಕಿರಣ್ ಕುಮಾರ್, ಚಾಲಕ ಪರ ಹೋರಾಟಗಾರ ಸ್ನೇಹಜೀವಿ ಸಂತೋಷ್ ಕುಮಾರ್, ಶ್ರೀನಿವಾಸ್ ಬಾಬು, ಪವನ್, ಸೇರಿದಂತೆ ಅನೇಕ ಮುಖಂಡರು ಶುಭಕೋರಿದರು.

ಜನ್ಮದಿನದ ಅಂಗವಾಗಿ ಸಾವಿರಾರು ಅಭಿಮಾನಿಗಳು, ಕನ್ನಡಪರ ಹೋರಾಟಗಾರರು, ನಾಡಿನ ಚಿಂತಕರು, ಸ್ವಾಮೀಜಿಗಳು, ವಿವಿಧ ಸಂಘಟನೆಗಳ ಮಹಿಳಾ ಅಧ್ಯಕ್ಷರು, ಪದಾಧಿಕಾರಿಗಳು, ಕಾರ್ಮಿಕ ಪರಿಷತ್ತಿನ ಸದಸ್ಯರು ಹಾಗೂ ಕನ್ನಡ ಚಿತ್ರರಂಗದ ಕಲಾವಿದರು ಸೇರಿದಂತೆ ಅನೇಕ ಗಣ್ಯರು ಶುಭಾಶಯಗಳನ್ನು ಸಲ್ಲಿಸಿ, ಅವರ ಸಮಾಜಮುಖಿ ಹೋರಾಟಗಳು ಇನ್ನಷ್ಟು ಯಶಸ್ಸು ಕಾಣಲಿ ಎಂದು ಹಾರೈಸಿದರು.

## ಅಪ್‌ಗ್ರಾಡ್-ಐಐಟಿ ರೂರ್ಕಿ ಸಹಯೋಗ

ಮುಂಬೈ




ಅಪ್‌ಗ್ರಾಡ್ ಕಲಿಕಾ ಬೆಂಬಲ ಕೇಂದ್ರಗಳು ಮತ್ತು ಐಐಟಿ ರೂರ್ಕಿಯ ಐಹಬ್ ದಿವ್ಯಸಂಪರ್ಕ್ ಸಂಸ್ಥೆಯೊಂದಿಗೆ ಕಾರ್ಯತಂತ್ರದ ಸಹಯೋಗವನ್ನು ಘೋಷಿಸಿವೆ. ಈ ಸಹಯೋಗದಡಿ ದತ್ತಾಂಶ ವಿಜ್ಞಾನ ಮತ್ತು ಪೂರ್ಣ ಶ್ರೇಣಿ ತಂತ್ರಾಂಶ ಅಭಿವೃದ್ಧಿ ಕ್ಷೇತ್ರಗಳಲ್ಲಿ ಎರಡು ಉದ್ಯಮ-ಸಂಬಂಧಿತ ಪ್ರಮಾಣೀಕರಣ ಕಾರ್ಯಕ್ರಮಗಳನ್ನು ಪರಿಚಯಿಸಲಾಗುತ್ತಿದ್ದು, ದೇಶಾದ್ಯಂತ ತರಗತಿ-ನೇತೃತ್ವದ ಕಲಿಕಾ ಕೇಂದ್ರಗಳ ಮೂಲಕ ತಂತ್ರಜ್ಞಾನ ಶಿಕ್ಷಣವನ್ನು ಮತ್ತಷ್ಟು ಸುಲಭವಾಗಿ ತಲುಪಿಸುವ ಉದ್ದೇಶ ಹೊಂದಲಾಗಿದೆ.

ಭಾರತ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂತರಶಿಸ್ತೀಯ ಸೈಬರ್-ಭೌತಿಕ ವ್ಯವಸ್ಥೆಗಳ ರಾಷ್ಟ್ರೀಯ ಮಿಷನ್ ಅಡಿಯಲ್ಲಿ ಸ್ಥಾಪಿಸಲಾದ ತಂತ್ರಜ್ಞಾನ ನಾವೀನ್ಯತಾ ಕೇಂದ್ರವಾಗಿರುವ ಐಹಬ್ ದಿವ್ಯಸಂಪರ್ಕ್, ಐಐಟಿ ರೂರ್ಕಿಯ ಸಹಯೋಗವು ಉದ್ಯೋಗಾವಕಾಶಗಳನ್ನು ಹೆಚ್ಚಿಸುವ ಹಾಗೂ ಭವಿಷ್ಯದ ತಂತ್ರಜ್ಞಾನ ಕ್ಷೇತ್ರಗಳಿಗೆ ಅಗತ್ಯವಿರುವ ಕೌಶಲ್ಯಯುತ ಪ್ರತಿಭೆಯನ್ನು ರೂಪಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ.

ಈ ಸಹಭಾಗಿತ್ವದ ಮೂಲಕ ದೇಶದ ವಿವಿಧ ಭಾಗಗಳಲ್ಲಿರುವ ಕಲಿಯುವವರಿಗೆ ಐಐಟಿ ರೂರ್ಕಿಯ ಐಹಬ್ ದಿವ್ಯಸಂಪರ್ಕ್‌ನಿಂದ ಉದ್ಯಮಕ್ಕೆ ಹೊಂದಿಕೆಯಾಗುವ ತಂತ್ರಜ್ಞಾನ ಪ್ರಮಾಣೀಕರಣ ಕಾರ್ಯಕ್ರಮಗಳಿಗೆ ಪ್ರವೇಶ ದೊರೆಯಲಿದೆ. ರಚನಾತ್ಮಕ ತರಗತಿ-ನೇತೃತ್ವದ ಕಲಿಕೆ, ಶೈಕ್ಷಣಿಕ ಗುಣಮಟ್ಟ, ಪ್ರಾಯೋಗಿಕ ಅನ್ವಯಿಕೆ ಹಾಗೂ ವೃತ್ತಿ ಕೇಂದ್ರಿತ ಮಾರ್ಗದರ್ಶನವನ್ನು ಸಂಯೋಜಿಸುವ ಮೂಲಕ ಕಲಿಯುವವರಿಗೆ ಸಮಗ್ರ ಶಿಕ್ಷಣದ ಅನುಭವ ಒದಗಿಸುವ ಗುರಿಯನ್ನು ಕಾರ್ಯಕ್ರಮಗಳು ಹೊಂದಿವೆ.

ಈ ಪ್ರಮಾಣೀಕರಣ ಕಾರ್ಯಕ್ರಮಗಳು ಅಪ್‌ಗ್ರಾಡ್‌ನ ದೇಶಾದ್ಯಂತ ಕಾರ್ಯನಿರ್ವಹಿಸುತ್ತಿರುವ 23 ಕಲಿಕಾ ಬೆಂಬಲ ಕೇಂದ್ರಗಳ ಜಾಲದ ಮೂಲಕ ಲಭ್ಯವಾಗಲಿವೆ. ಉದಯೋನ್ಮುಖ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಕೌಶಲ್ಯ ಹೊಂದಿರುವ ಪ್ರತಿಭೆಗಳಿಗೆ ಹೆಚ್ಚುತ್ತಿರುವ ಬೇಡಿಕೆಯನ್ನು ಪೂರೈಸುವುದರ ಜೊತೆಗೆ, ಐಐಟಿ ಪ್ರಮಾಣೀಕೃತ ತಂತ್ರಜ್ಞಾನ ಶಿಕ್ಷಣವನ್ನು ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳಿಗೆ ತಲುಪಿಸುವುದು ಈ ಸಹಯೋಗದ ಪ್ರಮುಖ ಉದ್ದೇಶವಾಗಿದೆ.

## ಕ್ಯಾಶ್‌ಫ್ರೀ ಪೇಮೆಂಟ್ಸ್: ಹೊಸ ಉದ್ಯಮಗಳಿಗೆ ರೂ.20 ಲಕ್ಷದವರೆಗೆ ಶೇ.0 ಪಾವತಿ ಗೇಟ್‌ವೇ ಶುಲ್ಕ

ಮುಂಬೈ

ಭಾರತದ ಪ್ರಮುಖ ಕೃತಕ ಬುದ್ಧಿಮತ್ತೆ ಆಧಾರಿತ ಪಾವತಿ ಸಂಸ್ಥೆ ಕ್ಯಾಶ್‌ಫ್ರೀ ಪೇಮೆಂಟ್ಸ್, ತನ್ನ ವೇದಿಕೆಯಲ್ಲಿ ಹೊಸದಾಗಿ ನೋಂದಾಯಿಸಿಕೊಳ್ಳುವ ಉದ್ಯಮಗಳಿಗೆ ವಿಶೇಷ ಶುಲ್ಕ ವಿನಾಯಿತಿ ಯೋಜನೆಯನ್ನು ಘೋಷಿಸಿದೆ. ಈ ಕೊಡುಗೆಯಡಿ ಹೊಸ ಉದ್ಯಮಗಳು ಮಾರ್ಚ್ 31, 2027ರವರೆಗೆ ತಮ್ಮ ಮೊದಲ ರೂ.20 ಲಕ್ಷದ ಒಟ್ಟು ಸರಕು ವಹಿವಾಟು ಮೌಲ್ಯಕ್ಕೆ ಪಾವತಿ ಗೇಟ್‌ವೇ ಶುಲ್ಕವನ್ನು ಪಾವತಿಸಬೇಕಾಗಿಲ್ಲ.

ಹಬ್ಬದ ಋತು ಆರಂಭಕ್ಕೂ ಮುನ್ನವೇ ಉದ್ಯಮಗಳಿಗೆ ಶುಲ್ಕರಹಿತವಾಗಿ ತಮ್ಮ ಆನ್‌ಲೈನ್ ವ್ಯವಹಾರವನ್ನು ಆರಂಭಿಸಲು ನೆರವಾಗುವುದು ಈ ಕೊಡುಗೆಯ ಪ್ರಮುಖ ಉದ್ದೇಶವಾಗಿದೆ. ವಿಶೇಷವಾಗಿ ಸ್ವಂತ ಆನ್‌ಲೈನ್ ಮಾರಾಟ ವೇದಿಕೆಗಳನ್ನು ಹೊಂದಿರುವ ಆರಂಭಿಕ ಹಂತದ ಹಾಗೂ ಬೆಳೆಯುತ್ತಿರುವ ಸಣ್ಣ ಮತ್ತು ಮಧ್ಯಮ ಉದ್ಯಮಗಳನ್ನು ಗಮನದಲ್ಲಿಟ್ಟುಕೊಂಡು ಈ ಯೋಜನೆಯನ್ನು ಪರಿಚಯಿಸಲಾಗಿದೆ.



ಕ್ಯಾಶ್‌ಫ್ರೀ ಪೇಮೆಂಟ್ಸ್ ವೇದಿಕೆಗೆ ಸೇರ್ಪಡೆಯಾಗುವ ಹೊಸ ಮಾರಾಟಗಾರರು ಕೆಲವೇ ನಿಮಿಷಗಳಲ್ಲಿ ತಮ್ಮ ಪಾವತಿ ವ್ಯವಸ್ಥೆಯನ್ನು ಸಕ್ರಿಯಗೊಳಿಸಿಕೊಳ್ಳಬಹುದಾಗಿದೆ. ಜೊತೆಗೆ ಮರುದಿನವೇ ಹಣವನ್ನು ತಮ್ಮ ಖಾತೆಗೆ ಜಮೆ ಮಾಡಿಕೊಳ್ಳುವ ಸೌಲಭ್ಯ ದೊರೆಯಲಿದ್ದು, ಹಬ್ಬದ ಋತುವಿನಾದ್ಯಂತ ವಿಶೇಷ ಖಾತೆ ನಿರ್ವಾಹಕರ ನೆರವನ್ನೂ ಪಡೆಯಬಹುದಾಗಿದೆ.

ಸಾಮಾನ್ಯವಾಗಿ ಹಬ್ಬದ ಋತುವಿನಲ್ಲಿ ಸಣ್ಣ ಉದ್ಯಮಗಳು ತಮ್ಮ ವಾರ್ಷಿಕ ವಹಿವಾಟಿನ ಬಹುಪಾಲು ಆದಾಯವನ್ನು ಗಳಿಸುತ್ತವೆ. ಇದೇ ಸಂದರ್ಭದಲ್ಲಿ ರಿಯಾಯಿತಿಗಳು, ವಿಶೇಷ ಕೊಡುಗೆಗಳು, ದಾಸ್ತಾನು ನಿರ್ವಹಣೆ ಹಾಗೂ ಜಾಹೀರಾತು ವೆಚ್ಚಗಳು ಉದ್ಯಮಗಳ ಲಾಭದ ಮೇಲೆ ಒತ್ತಡ ಉಂಟುಮಾಡುತ್ತವೆ. ಇದರೊಂದಿಗೆ ಪಾವತಿ ಗೇಟ್‌ವೇ ಶುಲ್ಕವೂ ಹೆಚ್ಚುವರಿ ವೆಚ್ಚವಾಗುತ್ತದೆ. ಈ ಶುಲ್ಕವನ್ನು ಸಂಪೂರ್ಣವಾಗಿ ಮನ್ನಾ ಮಾಡುವ ಮೂಲಕ ಉದ್ಯಮಗಳಿಗೆ ಹೆಚ್ಚಿನ ಹಣವನ್ನು ಉಳಿಸಲು ಅವಕಾಶ ಕಲ್ಪಿಸಲಾಗಿದ್ದು, ಉಳಿದ ಮೊತ್ತವನ್ನು ದಾಸ್ತಾನು, ಜಾಹೀರಾತು ಅಥವಾ ಸಾಗಣೆ ವೆಚ್ಚಗಳಿಗೆ ಬಳಸಿಕೊಳ್ಳಲು ಸಾಧ್ಯವಾಗಲಿದೆ ಎಂದು ಸಂಸ್ಥೆ ತಿಳಿಸಿದೆ.

## ಕರ್ನಾಟಕದಲ್ಲಿ ಪಾಲ್ಮೊನಾಸ್‌ನ 10ನೇ ಮಳಿಗೆ ಆರಂಭ

ಬೆಂಗಳೂರು: ಭಾರತದ ಮೊದಲ ಡೆಮಿ-ಫೈನ್ ಆಭರಣ ಸಂಸ್ಥೆ ಪಾಲ್ಮೊನಾಸ್ ಬೆಂಗಳೂರಿನ ಮಾರತ್ತಹಳ್ಳಿಯಲ್ಲಿ ತನ್ನ ನೂತನ ಮಳಿಗೆಯನ್ನು ಆರಂಭಿಸುವ ಮೂಲಕ ಕರ್ನಾಟಕದಲ್ಲಿ ಮತ್ತೊಂದು ಮಹತ್ವದ ಮೈಲಿಗಲ್ಲು ಸಾಧಿಸಿದೆ. ಈ ಹೊಸ ಮಳಿಗೆಯ ಆರಂಭದೊಂದಿಗೆ ಕರ್ನಾಟಕದಲ್ಲಿ ಪಾಲ್ಮೊನಾಸ್‌ನ ಮಳಿಗೆಗಳ ಸಂಖ್ಯೆ 10ಕ್ಕೆ ಏರಿಕೆಯಾಗಿದ್ದು, ರಾಜ್ಯವು ಸಂಸ್ಥೆಯ ಪ್ರಮುಖ ಮಾರುಕಟ್ಟೆಗಳಲ್ಲಿ ಒಂದಾಗಿ ಹೊರಹೊಮ್ಮಿದೆ.




ದೇಶದಲ್ಲಿ ಪಾಲ್ಮೊನಾಸ್‌ನ 75ನೇ ಮಳಿಗೆ ಆರಂಭವಾಗಿರುವ ಹಿನ್ನೆಲೆಯಲ್ಲಿ ವಿಶೇಷ ಕೊಡುಗೆಯನ್ನೂ ಘೋಷಿಸಲಾಗಿದೆ. ಮಳಿಗೆ ಆರಂಭದ ಸಂದರ್ಭದಲ್ಲಿ ಮೊದಲ 75 ಗ್ರಾಹಕರು ಕೇವಲ 75 ರೂಪಾಯಿಗೆ ಆಭರಣ ಖರೀದಿಸುವ ಅವಕಾಶವನ್ನು ಪಡೆಯಲಿದ್ದಾರೆ. ಮಾರತ್ತಹಳ್ಳಿ ಮಳಿಗೆಯಲ್ಲಿ ಪಾಲ್ಮೊನಾಸ್‌ನ ಸಂಪೂರ್ಣ ಆಭರಣ ಸಂಗ್ರಹ ಲಭ್ಯವಿದೆ. 18 ಕ್ಯಾರೆಟ್ ವರ್ಮೀಲ್ ಡೆಮಿ-ಫೈನ್ ಆಭರಣಗಳಿಂದ ಹಿಡಿದು 9 ಕ್ಯಾರೆಟ್ ಚಿನ್ನ ಮತ್ತು ಸ್ಟರ್ಲಿಂಗ್ ಸಿಲ್ವರ್ ಆಭರಣಗಳವರೆಗೆ ವಿವಿಧ ವಿನ್ಯಾಸಗಳನ್ನು ಗ್ರಾಹಕರು ನೇರವಾಗಿ ವೀಕ್ಷಿಸಿ.

## ಭಾರತದಲ್ಲಿ ಮೊದಲ ಬಾರಿಗೆ ಎಬಿಕ್ಸ್ಯಾಶ್ ವರ್ಲ್ಡ್ ಮನಿಗೆ ಶಾಶ್ವತ ಆರ್‌ಬಿಐ ಪರವಾನಗಿ

ಬೆಂಗಳೂರು

ಎಬಿಕ್ಸ್ಯಾಶ್ ವರ್ಲ್ಡ್ ಮನಿ ಲಿಮಿಟೆಡ್ ಶಾಶ್ವತ ಭಾರತೀಯ ರಿಸರ್ವ್ ಬ್ಯಾಂಕ್ ಪರವಾನಗಿ ಹಾಗೂ ವಿಸ್ತೃತ ಕಾರ್ಯವ್ಯಾಪ್ತಿಯನ್ನು ಪಡೆದುಕೊಂಡಿದ್ದು, ಭಾರತದ ಮೊದಲ ಅಧಿಕೃತ ಡೀಲರ್ ವರ್ಗ-ಋಋ ಸಂಸ್ಥೆಯಾಗಿ ಈ ಮಹತ್ವದ ಸಾಧನೆ ಮಾಡಿದೆ ಎಂದು ಸಂಸ್ಥೆ ತಿಳಿಸಿದೆ. ಈ ಬೆಳವಣಿಗೆಯೊಂದಿಗೆ ವ್ಯಾಪಾರ ಸಂಬಂಧಿತ ವಿದೇಶಿ ಹಣ ವರ್ಗಾವಣೆ ಹಾಗೂ ಕುಟುಂಬ ನಿರ್ವಹಣಾ ಹಣ ರವಾನೆ ಸೇವೆಗಳು ದೇಶದ ಲಕ್ಷಾಂತರ ಗ್ರಾಹಕರು ಮತ್ತು ಸಣ್ಣ ಹಾಗೂ ಮಧ್ಯಮ ಉದ್ಯಮಿಗಳಿಗೆ ಮತ್ತಷ್ಟು ಸುಲಭವಾಗಿ ಲಭ್ಯವಾಗಲಿವೆ.

ಭಾರತೀಯ ರಿಸರ್ವ್ ಬ್ಯಾಂಕ್ 2026ರ ಮೇನಲ್ಲಿ ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆಯಡಿ ಜಾರಿಗೆ ತಂದ ಪರಿಷ್ಕೃತ ನಿಯಮಾವಳಿಗಳ ಪ್ರಕಾರ, ಮೊದಲ ಬಾರಿಗೆ ಅಧಿಕೃತ ಡೀಲರ್ ವರ್ಗ-ಋಋ ಸಂಸ್ಥೆಗಳಿಗೆ ಪ್ರತಿ ವ್ಯವಹಾರಕ್ಕೆ ರೂ.25 ಲಕ್ಷದವರೆಗೆ ವ್ಯಾಪಾರ ಸಂಬಂಧಿತ ವಿದೇಶಿ ಹಣ ವರ್ಗಾವಣೆ ಹಾಗೂ ಕುಟುಂಬ ನಿರ್ವಹಣಾ ಹಣ ರವಾನೆಗಳನ್ನು ನಿರ್ವಹಿಸಲು ಅವಕಾಶ ಕಲ್ಪಿಸಲಾಗಿದೆ. ಈ ಹೊಸ ಅವಕಾಶದ ಮೊದಲ ಪ್ರಯೋಜನ ಪಡೆದ ಸಂಸ್ಥೆಯಾಗಿ ಎಬಿಕ್ಸ್ಯಾಶ್ ವರ್ಲ್ಡ್ ಮನಿ ಹೊರಹೊಮ್ಮಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಈ ಬದಲಾವಣೆಗೆ ಮೊದಲು ವ್ಯಾಪಾರ ಸಂಬಂಧಿತ ವಿದೇಶಿ ಹಣ ವರ್ಗಾವಣೆಗಳು ಮುಖ್ಯವಾಗಿ ಬ್ಯಾಂಕ್‌ಗಳು ಹಾಗೂ ಅಧಿಕೃತ ಡೀಲರ್ ವರ್ಗ-ಋ ಸಂಸ್ಥೆಗಳ ವ್ಯಾಪ್ತಿಗೆ ಸೀಮಿತವಾಗಿದ್ದವು. ಇದೀಗ ವಿಸ್ತೃತ ಅಧಿಕಾರದೊಂದಿಗೆ ಎಬಿಕ್ಸ್ಯಾಶ್ ವರ್ಲ್ಡ್ ಮನಿ ಸಣ್ಣ, ಅತಿಸಣ್ಣ ಹಾಗೂ ಮಧ್ಯಮ ಉದ್ಯಮಗಳಿಗೆ ನೇರವಾಗಿ ಅಂತರರಾಷ್ಟ್ರೀಯ ಪಾವತಿ ಸೇವೆಗಳನ್ನು ಒದಗಿಸಲು ಸಾಧ್ಯವಾಗಲಿದೆ. ಇದರಿಂದ ಬ್ಯಾಂಕ್‌ಗಳ ಮೇಲಿನ ಅವಲಂಬನೆ ಕಡಿಮೆಯಾಗುವುದರ ಜೊತೆಗೆ, ಉದ್ಯಮಿಗಳಿಗೆ ವೇಗವಾದ, ಸುಲಭ ಹಾಗೂ ಹೆಚ್ಚು ಲಭ್ಯವಾಗುವ ಗಡಿಯಾಚೆಗಿನ ಪಾವತಿ ವ್ಯವಸ್ಥೆ ದೊರೆಯಲಿದೆ ಎಂದು ಸಂಸ್ಥೆ ಹೇಳಿದೆ.

1999ರಿಂದ ಗಡಿಯಾಚೆಗಿನ ಪಾವತಿ ಸೇವಾ ಕ್ಷೇತ್ರದಲ್ಲಿ 27 ವರ್ಷಗಳ ಅನುಭವ ಹೊಂದಿರುವ ಎಬಿಕ್ಸ್ಯಾಶ್ ವರ್ಲ್ಡ್ ಮನಿ, ಭಾರತದ ನಗದು-ನಗದು ಒಳಹರಿವು ಹಣ ವರ್ಗಾವಣೆಗಳಲ್ಲಿ ಶೇ.75ಕ್ಕೂ ಹೆಚ್ಚು ಪಾಲನ್ನು ಹೊಂದಿದೆ ಎಂದು ತಿಳಿಸಿದೆ. ದೇಶಾದ್ಯಂತ 25,000ಕ್ಕೂ ಹೆಚ್ಚು ಗ್ರಾಹಕ ಸೇವಾ ಕೇಂದ್ರಗಳು ಹಾಗೂ ವಿದೇಶಿ ವಿನಿಮಯ ಸೇವೆ ಒದಗಿಸುವ 40ಕ್ಕೂ ಹೆಚ್ಚು ಪಾಲುದಾರ ಬ್ಯಾಂಕ್‌ಗಳ ಜಾಲವನ್ನು ಸಂಸ್ಥೆ ಹೊಂದಿದೆ.

ಪ್ರತಿ ವ್ಯವಹಾರಕ್ಕೆ ರೂ.25 ಲಕ್ಷದವರೆಗೆ ವ್ಯಾಪಾರ ಸಂಬಂಧಿತ ವಿದೇಶಿ ಹಣ ವರ್ಗಾವಣೆ ನಡೆಸಲು ದೊರೆತಿರುವ ಹೊಸ ಅವಕಾಶವು ವಿಶೇಷವಾಗಿ ದೇಶದ ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ಅನುಕೂಲವಾಗಲಿದೆ.

## ಪ್ಲಾಸ್ಟ್‌ಇಂಡಿಯಾ ಫೌಂಡೇಶನ್‌ನಿಂದ ನವದೆಹಲಿಯಲ್ಲಿ ಪ್ರಾದೇಶಿಕ ಕಚೇರಿ ಉದ್ಘಾಟನೆ



ಬೆಂಗಳೂರು: ಭಾರತೀಯ ಪ್ಲಾಸ್ಟಿಕ್ ಉದ್ಯಮದ ಪ್ರಮುಖ ಸಂಸ್ಥೆಯಾದ ಪ್ಲಾಸ್ಟ್‌ಇಂಡಿಯಾ ಫೌಂಡೇಶನ್ ನವದೆಹಲಿಯಲ್ಲಿ ತನ್ನ ನೂತನ ಪ್ರಾದೇಶಿಕ ಕಚೇರಿಯನ್ನು ಉದ್ಘಾಟಿಸಿದೆ. ಉದ್ಯಮ, ಸರ್ಕಾರ ಹಾಗೂ ಶೈಕ್ಷಣಿಕ ಸಂಸ್ಥೆಗಳ ನಡುವಿನ ಸಹಯೋಗವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಆರಂಭಿಸಲಾಗಿರುವ ಈ ಕಚೇರಿ, ಭಾರತೀಯ ಪ್ಲಾಸ್ಟಿಕ್ ಉದ್ಯಮದ ನೀತಿ ಸಮರ್ಥನೆ, ನಾವೀನ್ಯತೆ, ಕೌಶಲ್ಯ ಅಭಿವೃದ್ಧಿ ಹಾಗೂ ಸುಸ್ಥಿರ ಬೆಳವಣಿಗೆಗೆ ಪ್ರಮುಖ ಕೇಂದ್ರವಾಗಿ ಕಾರ್ಯನಿರ್ವಹಿಸಲಿದೆ.

ಪ್ಲಾಸ್ಟ್‌ಇಂಡಿಯಾ ಫೌಂಡೇಶನ್ ಅಧ್ಯಕ್ಷ ರವೀಶ್ ಕಾಮತ್ ಅವರ ನೇತೃತ್ವದಲ್ಲಿ ಸ್ಥಾಪಿಸಲಾಗಿರುವ ನವದೆಹಲಿ ಕಚೇರಿಯು ನೀತಿ ರೂಪಿಸುವಿಕೆ, ಉದ್ಯಮದ ಪ್ರಾತಿನಿಧ್ಯ, ವಿವಿಧ ಪಾಲುದಾರರೊಂದಿಗೆ ಸಮನ್ವಯ ಹಾಗೂ ಸರ್ಕಾರ, ಶೈಕ್ಷಣಿಕ ಸಂಸ್ಥೆಗಳು, ಉದ್ಯಮ ಸಂಘಟನೆಗಳು ಮತ್ತು ಇತರ ಸಹಭಾಗಿ ಸಂಸ್ಥೆಗಳೊಂದಿಗೆ ಕಾರ್ಯತಂತ್ರದ ಸಹಯೋಗಕ್ಕೆ ವೇದಿಕೆಯಾಗಲಿದೆ.

ಪ್ಲಾಸ್ಟಿಕ್ ಮೌಲ್ಯ ಸರಪಳಿಯುದ್ದಕ್ಕೂ ನಾವೀನ್ಯತೆ, ಕೌಶಲ್ಯ ಅಭಿವೃದ್ಧಿ, ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ಬೆಂಬಲ, ಉದ್ಯಮ-ಶೈಕ್ಷಣಿಕ ಸಹಭಾಗಿತ್ವ ಹಾಗೂ ಸಾಮರ್ಥ್ಯ ವೃದ್ಧಿಗೆ ಕಚೇರಿ ಪ್ರಮುಖ ಪಾತ್ರ ವಹಿಸಲಿದೆ.

ನವದೆಹಲಿಯಲ್ಲಿ ಸಾಂಪ್ರದಾಯಿಕ ಪೂಜಾ ವಿಧಿವಿಧಾನಗಳೊಂದಿಗೆ ನೂತನ ಕಚೇರಿಯನ್ನು ಅಧಿಕೃತವಾಗಿ ಉದ್ಘಾಟಿಸಲಾಯಿತು. ಪ್ಲಾಸ್ಟ್‌ಇಂಡಿಯಾ ಫೌಂಡೇಶನ್ ಉಪಾಧ್ಯಕ್ಷ ಡಾ. ರಾಜು ದೇಸಾಯಿ ಹಾಗೂ ಗೌರವ ಖಜಾಂಚಿ ಧರ್ಮೇಂದ್ರ ಗಾಂಧಿ ಅವರು ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ‘ಎಲ್ಲ ವರ್ಗದ ಬಡವರ ಅಭಿವೃದ್ಧಿಗೆ ಸರ್ಕಾರ ಬದ್ಧ’

ಬೆಂಗಳೂರು

ರಾಜ್ಯದ ಎಲ್ಲ ವರ್ಗದ ಆರ್ಥಿಕವಾಗಿ ಹಿಂದುಳಿದ ಜನರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ ಹೇಳಿದರು.

ವಿಧಾನಸೌಧದಲ್ಲಿ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ವತಿಯಿಂದ 2026-27ನೇ ಸಾಲಿನ ವಿಪ್ರ ಸ್ವ ಉದ್ಯಮ ನೇರ ಸಾಲ ಯೋಜನೆಗೆ ಅರ್ಜಿ ಆಹ್ವಾನಿಸುವ ಕುರಿತ ಕರಪತ್ರವನ್ನು ಬಿಡುಗಡೆ ಮಾಡಿ ಅವರು ಮಾತನಾಡಿದರು.

ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೆ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಸ್ವಯಂ ಉದ್ಯೋಗ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ನೆರವು ನೀಡುವ ಉದ್ದೇಶದಿಂದ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯನ್ನು ಸ್ಥಾಪಿಸಲಾಗಿದೆ ಎಂದು ತಿಳಿಸಿದ ಅವರು, ಸಮುದಾಯದ ಬಡವರ ಸರ್ವತೋಮುಖ ಅಭಿವೃದ್ಧಿಗೆ ಮಂಡಳಿ ಕಾರ್ಯನಿರ್ವಹಿಸುತ್ತಿದೆ ಎಂದರು.



ಸರ್ಕಾರವು 2025-26ನೇ ಸಾಲಿನಲ್ಲಿ ವಿಪ್ರ ಸ್ವ ಉದ್ಯಮ ನೇರ ಸಾಲ ಯೋಜನೆಯನ್ನು ಹೊಸದಾಗಿ ಆರಂಭಿಸಿದ್ದು, ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೆ ಗುಡಿ ಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ ಉದ್ಯಮ, ಹೈನುಗಾರಿಕೆ ಸೇರಿದಂತೆ ವಿವಿಧ ಸ್ವ ಉದ್ಯೋಗ ಚಟುವಟಿಕೆಗಳಿಗೆ ಆರ್ಥಿಕ ನೆರವು ನೀಡಲಾಗುತ್ತಿದೆ ಎಂದು ಹೇಳಿದರು.

ಈ ಯೋಜನೆಯಡಿ ಕನಿಷ್ಠ 1 ಲಕ್ಷ ರೂಪಾಯಿಯಿಂದ ಗರಿಷ್ಠ 2 ಲಕ್ಷ ರೂಪಾಯಿವರೆಗೆ ಸಾಲ-ಸಹಾಯಧನ ನೀಡಲಾಗುತ್ತಿದೆ. ಒಟ್ಟು ಸಾಲ ಮೊತ್ತದಲ್ಲಿ ಶೇ.20ರಷ್ಟು ಸಹಾಯಧನ ನೀಡಲಾಗುತ್ತಿದ್ದು, ಉಳಿದ ಶೇ.80ರಷ್ಟು ಸಾಲವನ್ನು ಶೇ.4ರ ಬಡ್ಡಿದರದಲ್ಲಿ 34 ಕಂತುಗಳಲ್ಲಿ ಮರುಪಾವತಿ ಮಾಡಬೇಕಾಗಿದೆ ಎಂದು ವಿವರಿಸಿದರು.

ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರು ಈ ಯೋಜನೆಯ ಪ್ರಯೋಜನ ಪಡೆದುಕೊಂಡು ಸ್ವಾವಲಂಬಿ ಜೀವನ ರೂಪಿಸಿಕೊಳ್ಳಬೇಕು ಎಂದು ಡಾ. ಜಿ. ಪರಮೇಶ್ವರ ಮನವಿ ಮಾಡಿದರು.

2025-26ನೇ ಸಾಲಿನಲ್ಲಿ ಯೋಜನೆಯಡಿ ಒಟ್ಟು 1,333 ಅರ್ಜಿಗಳು ಸ್ವೀಕೃತವಾಗಿದ್ದು, 20.60 ಕೋಟಿ ರೂಪಾಯಿ ವೆಚ್ಚದಲ್ಲಿ 1,048 ಫಲಾನುಭವಿಗಳಿಗೆ ಸಾಲ ಸಹಾಯಧನ ಮಂಜೂರು ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

ಸಾಲ ಮರುಪಾವತಿಯ ಮೊದಲ ಹಾಗೂ ಎರಡನೇ ಕಂತುಗಳಲ್ಲಿ ಶೇ.98ರಷ್ಟು ಮರುಪಾವತಿ ಸಾಧಿಸಿರುವುದು ಮಂಡಳಿಯ ಪ್ರಮುಖ ಸಾಧನೆಯಾಗಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಮಂಡಳಿಯಿಂದ ಸಾಲ ಪಡೆದ ಎಲ್ಲ ಫಲಾನುಭವಿಗಳು ಸೌಲಭ್ಯವನ್ನು ಸದುಪಯೋಗಪಡಿಸಿಕೊಂಡು ನಿಗದಿತ ಅವಧಿಯಲ್ಲಿ ಸಾಲ ಮರುಪಾವತಿ ಮಾಡಿದರೆ, ಮುಂದಿನ ದಿನಗಳಲ್ಲಿ ಇನ್ನಷ್ಟು ಅರ್ಹರಿಗೆ ಯೋಜನೆಯ ಪ್ರಯೋಜನ ಕಲ್ಪಿಸಲು ಸಾಧ್ಯವಾಗುತ್ತದೆ ಎಂದು ಡಾ. ಜಿ. ಪರಮೇಶ್ವರ ಹೇಳಿದರು.

# ಒತ್ತುವರಿ ತೆರವು ವೇಳೆ ಜಿಬಿಎ ಅಧಿಕಾರಿಗಳ ಮೇಲೆ ದಾಳಿ

ಬೆಂಗಳೂರು

ರಾಜಧಾನಿಯ ಅತ್ಯಂತ ಗಿಜಿಗುಡುವ ಹಾಗೂ ಸೂಕ್ಷ್ಮ ಪ್ರದೇಶವಾಗಿರುವ ಶಿವಾಜಿನಗರದಲ್ಲಿ ಫುಟ್‌ಪಾತ್ ಒತ್ತುವರಿ ತೆರವು ಕಾರ್ಯಾಚರಣೆ ನಡೆಸುತ್ತಿದ್ದ ಜಿಬಿಎ ಅಧಿಕಾರಿಗಳು ಹಾಗೂ ಸಿಬ್ಬಂದಿ ಮೇಲೆ ಪುಂಡರ ಗುಂಪೊಂದು ಹಲ್ಲೆ ನಡೆಸಿದ ಘಟನೆ ನಡೆದಿದೆ.

ಶಿವಾಜಿನಗರ ಬಸ್ ನಿಲ್ದಾಣದ ಬಳಿ ಜಿಬಿಎ ಅಧಿಕಾರಿಗಳು ಬೆಳಗ್ಗೆಯಿಂದ ಫುಟ್‌ಪಾತ್ ಒತ್ತುವರಿ ತೆರವು ಕಾರ್ಯಾಚರಣೆ ನಡೆಸುತ್ತಿದ್ದರು. ಈ ವೇಳೆ ಮಧ್ಯಾಹ್ನ ಸುಮಾರು 12.30ರ ವೇಳೆಗೆ ಇನ್ನೋವಾ ಕಾರಿನಲ್ಲಿ ಬಂದ ಬಸವರಾಜ್ ಪಡುಕೋಟೆ ಹಾಗೂ ಆತನ ಬೆಂಬಲಿಗರು ಏಕಾಏಕಿ ಅಧಿಕಾರಿಗಳ ಮೇಲೆ ದಾಳಿ ನಡೆಸಿದ್ದಾರೆ ಎಂದು ಆರೋಪಿಸಲಾಗಿದೆ.

ತೆರವು ಕಾರ್ಯಾಚರಣೆಯಲ್ಲಿ ತೊಡಗಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರ ಮಾಧವ್ ರಾವ್ ಅವರ ಮೇಲೆ ಕೆಲವರು ಅಟ್ಟಾಡಿಸಿಕೊಂಡು ಹಲ್ಲೆ ನಡೆಸಿದ್ದಾರೆ.

ತಳ್ಳಿದ ಪರಿಣಾಮ ಅಧಿಕಾರಿ ಕೆಳಗೆ ಬಿದ್ದಿದ್ದು, ಬಳಿಕ ಹೆಲ್ಮೆಟ್ ಹಾಗೂ ಪ್ಲಾಸ್ಟಿಕ್ ಕುರ್ಚಿಗಳಿಂದ ಹಲ್ಲೆ ನಡೆಸಲಾಗಿದೆ ಎಂದು ಸಿಬ್ಬಂದಿ ಆರೋಪಿಸಿದ್ದಾರೆ.

ಇದೇ ವೇಳೆ ಮಹಿಳಾ ಅಧಿಕಾರಿಯೊಬ್ಬರ ಮೇಲೂ ದುರ್ವರ್ತನೆ ತೋರಲಾಗಿದೆ ಎಂಬ ಆರೋಪ ಕೇಳಿಬಂದಿದೆ.



‘ನಮ್ಮ ಕರ್ನಾಟಕ ಸೇನೆ’ ಸಂಘಟನೆಯ ಬಸವರಾಜ್ ಪಡುಕೋಟೆ ಹಾಗೂ ಆತನ ಬೆಂಬಲಿಗರು ಮಹಿಳಾ ಅಧಿಕಾರಿಯ ಮುಖದ ಸಮೀಪ ಬಂದು ಪೆಪ್ಪರ್ ಸ್ಪ್ರೇ ಬಳಸಿ ಆತಂಕದ ವಾತಾವರಣ ಸೃಷ್ಟಿಸಿದ್ದಾರೆ ಎಂದು ಆರೋಪಿಸಲಾಗಿದೆ. “ಮುಖದ ಹತ್ತಿರ ಬಂದು ಪೆಪ್ಪರ್ ಸ್ಪ್ರೇ ಮಾಡಿದರು. ಜೀವಭಯದಿಂದ ನಾವು ಅಲ್ಲಿಂದ ಓಡಿ ಅಡಗಿಕೊಳ್ಳಬೇಕಾಯಿತು. ಕೆಲಸ ಮಾಡಲು ಭಯವಾಗುತ್ತಿದೆ. ನಮಗೆ ತಕ್ಷಣ ಸೂಕ್ತ ಭದ್ರತೆ ಒದಗಿಸಬೇಕು” ಎಂದು ಮಹಿಳಾ ಅಧಿಕಾರಿ ಸಾವಿತ್ರಿ ತಮ್ಮ ಆತಂಕ ವ್ಯಕ್ತಪಡಿಸಿದ್ದಾರೆ.

ಕಾರ್ಯಾಚರಣೆ ವೇಳೆ ಸ್ಥಳದಲ್ಲಿ ನಾಲ್ವರು ಪೊಲೀಸರು ಇದ್ದರೂ ಯಾವುದೇ ಕ್ರಮ ಕೈಗೊಳ್ಳದೆ ವಿಡಿಯೊ ಚಿತ್ರೀಕರಣ ಮಾಡುತ್ತಾ ನಿಂತಿದ್ದರು ಎಂಬ ಆರೋಪವನ್ನು ಜಿಬಿಎ ಸಿಬ್ಬಂದಿ ಮಾಡಿದ್ದಾರೆ. ಸೂಕ್ಷ್ಮ ಪ್ರದೇಶದಲ್ಲಿ ಕಾರ್ಯಾಚರಣೆ ನಡೆಸುವ ಸಂದರ್ಭದಲ್ಲಿ ಪೊಲೀಸರು ಹೆಚ್ಚಿನ ಎಚ್ಚರಿಕೆ ವಹಿಸಬೇಕಿತ್ತು ಎಂದು ಸಿಬ್ಬಂದಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಜಿಬಿಎ ನೌಕರರ ಸಂಘದ ಅಧ್ಯಕ್ಷ ಅಮೃತ್ ರಾಜ್ ಮಾತನಾಡಿ, ಬಸವರಾಜ್ ಪಡುಕೋಟೆ ಕನ್ನಡಪರ ಸಂಘಟನೆಯ ಹೆಸರಿನಲ್ಲಿ ಸ್ಥಳೀಯ ವ್ಯಾಪಾರಿಗಳಿಂದ ನಿಯಮಿತವಾಗಿ ಹಣ ವಸೂಲಿ ಮಾಡುತ್ತಿದ್ದ ಎಂದು ಆರೋಪಿಸಿದರು. “ಫುಟ್‌ಪಾತ್ ಒತ್ತುವರಿ ತೆರವುಗೊಂಡರೆ ಆತನ ಅಕ್ರಮ ಹಣ ವಸೂಲಿ ನಿಲ್ಲುತ್ತದೆ ಎಂಬ ಕಾರಣಕ್ಕೆ ಈ ದಾಳಿ ನಡೆಸಲಾಗಿದೆ. ಅಧಿಕಾರಿಗಳ ಮೇಲೆ ನಡೆದಿರುವ ಹಲ್ಲೆ ಖಂಡನೀಯ” ಎಂದು ಅವರು ಆರೋಪಿಸಿದರು.

# ಕೋಲಾರಕ್ಕೆ ಮಕ್ಕಳ ರಕ್ಷಣಾ ಆಯೋಗದ ಅಧ್ಯಕ್ಷರ ಭೇಟಿ



ಕೋಲಾರ

ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಸಂತೋಷ್ ಕುಮಾರ್ ಹಾಗೂ ಸದಸ್ಯರಾದ ಸತ್ಯ ನಾರಾಯಣ ಶೆಟ್ಟಿ ಕೋಲಾರ ಜಿಲ್ಲೆಗೆ ಮಂಗಳವಾರ ಅಧಿಕೃತ ಭೇಟಿ ನೀಡಿ ಜಿಲ್ಲಾಧಿಕಾರಿಗಳೊಂದಿಗೆ ಅವರ ಕಚೇರಿಯಲ್ಲಿ ಸಮಾಲೋಚನೆ ನಡೆಸಿದರು.

ಈ ವೇಳೆ ಜಿಲ್ಲೆಯಲ್ಲಿ ಜಾರಿಯಲ್ಲಿರುವ ಮಕ್ಕಳ ರಕ್ಷಣಾ ಕಾರ್ಯಕ್ರಮಗಳು, ಶಿಕ್ಷಣ ಹಕ್ಕು ಕಾಯ್ದೆಯ ಅನುಷ್ಠಾನ ಹಾಗೂ ಮಕ್ಕಳ ಕಲ್ಯಾಣಕ್ಕಾಗಿ ಜಿಲ್ಲಾಡಳಿತ ಕೈಗೊಂಡಿರುವ ವಿವಿಧ ಅಭಿವೃದ್ಧಿ ಹಾಗೂ ಸುರಕ್ಷತಾ ಕ್ರಮಗಳ ಕುರಿತು ಮಾನ್ಯ ಜಿಲ್ಲಾಧಿಕಾರಿಗಳು ಅಧ್ಯಕ್ಷರಿಗೆ ವಿವರವಾದ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ಮಕ್ಕಳ ಹಕ್ಕುಗಳ ಸಂರಕ್ಷಣೆ ಮತ್ತು ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಕೈಗೊಂಡಿರುವ ಕಟ್ಟುನಿಟ್ಟಿನ ಕ್ರಮಗಳ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಎಸ್.ಎಂ. ಮಂಗಳ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ನಾರಾಯಣಸ್ವಾಮಿ ಸೇರಿದಂತೆ ಸಂಬಂಧಿಸಿದ ಇಲಾಖೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಬರಪರಿಸ್ಥಿತಿ: ಜಿಲ್ಲಾಧಿಕಾರಿಗಳಿಂದ ತಾಲ್ಲೂಕುವಾರು ವರದಿ ಪಡೆದು ಕ್ರಮ

ಬೆಂಗಳೂರು

ರಾಜ್ಯದಲ್ಲಿ ಬರಪೀಡಿತ ಜಿಲ್ಲೆಗಳ ಘೋಷಣೆಗಾಗಿ ಎಲ್ಲ ಜಿಲ್ಲಾಧಿಕಾರಿಗಳಿಂದ ವಾಸ್ತವಾಂಶಗಳನ್ನು ಆಧರಿಸಿದ ತಾಲೂಕುವಾರು ವರದಿಗಳನ್ನು ಪಡೆಯಲಾಗುತ್ತಿದೆ ಎಂದು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಸುದ್ದಿಗಾರರ ಜೊತೆ ಮಾತನಾಡಿದ ಅವರು, ಪ್ರತಿ ಜಿಲ್ಲೆಗೆ ಕುಡಿಯುವ ನೀರು ಒದಗಿಸಲು ವಿಶೇಷ ಅನುದಾನ ಒದಗಿಸಲಾಗಿದೆ. ಜೊತೆಗೆ ಎಲ್ಲ ಜಿಲ್ಲಾಧಿಕಾರಿಗಳ ಪಿಡಿ ಖಾತೆಯಲ್ಲಿ 329 ಕೋಟಿ ರೂಪಾಯಿ ಹಣ ಮೀಸಲಿರಿಸಲಾಗಿದೆ.

ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಬರಪರಿಸ್ಥಿತಿ ಎದುರಿಸಲು ಒಂದು ಕೋಟಿ ರೂಪಾಯಿ ಅನುದಾನ ನೀಡಲಾಗುತ್ತಿದೆ. ಬರ ಪರಿಸ್ಥಿತಿ ನಿಭಾಯಿಸಲು ಸರ್ಕಾರಕ್ಕೆ ಹಣದ ಕೊರತೆ ಇಲ್ಲ ಎಂದು ಅವರು ಹೇಳಿದರು.

ಜಿಲ್ಲಾಧಿಕಾರಿಗಳಿಂದ ವರದಿ ಸ್ವೀಕರಿಸಿದ ನಂತರ ರೈತರು ಹಾಗೂ ಸಾಮಾನ್ಯ ಜನರಿಗೆ ಅನುಕೂಲವಾಗುವಂತೆ ಹಾಗೂ ಜನರು ಗುಳೆ ಹೋಗುವುದನ್ನು ತಪ್ಪಿಸಲು ಪರಿಹಾರ ಕ್ರಮಗಳನ್ನು ಪ್ರಕಟಿಸಲಾಗುವುದು ಎಂದು ತಿಳಿಸಿದರು.

ಸಂಪುಟ ವಿಸ್ತರಣೆ ಸಂಬಂಧ ಮುಖ್ಯಮಂತ್ರಿ ಹಾಗೂ ಹಿರಿಯ ನಾಯಕರು ದೆಹಲಿಗೆ ತೆರಳಿದ್ದು, ಹೈಕಮಾಂಡ್ ಜೊತೆ ಮಾತುಕತೆ ನಡೆಸಿ, ಸಚಿವ ಸಂಪುಟಕ್ಕೆ ಸೇರಲಿರುವವರ ಹೆಸರನ್ನು ಅಂತಿಮಗೊಳಿಸಲಾಗುವುದು.

ಹೈಕಮಾಂಡ್ ಒಪ್ಪಿದರೆ ತಕ್ಷಣವೇ ಸಂಪುಟ ವಿಸ್ತರಣೆಯಾಗಲಿದೆ ಎಂದು ಪರಮೇಶ್ವರ್ ಹೇಳಿದರು. ಜಾತಿ ಹಾಗೂ ಕಾಯಂ ನಿವಾಸಿ ಪತ್ರ ನೀಡುವ ಕುರಿತು ಬಿಜೆಪಿಯವರು ಮಾಡುತ್ತಿರುವ ಆರೋಪಗಳಲ್ಲಿ ಹುರುಳಿಲ್ಲ. ರಾಜ್ಯ ಸರ್ಕಾರ ಕೇಂದ್ರದ ಅಧಿಕಾರದಲ್ಲಿ ಹಸ್ತಕ್ಷೇಪ ಮಾಡುತ್ತಿಲ್ಲ.

ಸದ್ಯ ರಾಜ್ಯದಲ್ಲಿ ನಡೆಯುತ್ತಿರುವ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆಗೆ ಅನುಕೂಲವಾಗುವಂತೆ ಜಾತಿ ಹಾಗೂ ಕಾಯಂ ನಿವಾಸಿ ಪ್ರಮಾಣಪತ್ರಗಳನ್ನು ವಿತರಿಸಲಾಗುತ್ತಿದೆ ಎಂದು ಅವರು ಸ್ಪಷ್ಟಪಡಿಸಿದರು.

# ಹಳೆಯ ದ್ವೇಷಕ್ಕೆ ಕೃಷಿ ಹೊಂಡದ ಟಾರ್ಪಾಲಿನ್ ಕತ್ತರಿ: ರೈತ ಕಂಗಾಲು

ವಿಜಯಪುರ

ಹೋಬಳಿಯ ಎ.ರಂಗನಾಥಪುರ ಗ್ರಾಮದಲ್ಲಿ ಹಳೆಯ ದ್ವೇಷದ ಹಿನ್ನೆಲೆಯಲ್ಲಿ ಕೃಷಿ ಹೊಂಡದ ಟಾರ್ಪಾಲಿನ್ ಕತ್ತರಿಸಿದ ಘಟನೆ ನಡೆದಿದೆ. ಈ ಗ್ರಾಮದ ರೈತ ಚನ್ನಪ್ಪ ಅವರಿಗೆ ಸೇರಿದ ಕೃಷಿ ಹೊಂಡಕ್ಕೆ ಅಳವಡಿಸಿದ್ದ ಟಾರ್ಪಾಲಿನ್ ಅನ್ನು ಇದೇ ಗ್ರಾಮದ ಕುಮಾರ್ ಎಂಬಾತ ಕತ್ತರಿಸಿದ್ದಾನೆ ಎಂದು ಆರೋಪಿಸಿ, ಚನ್ನಪ್ಪ ಅವರು ವಿಜಯಪುರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ದೂರಿನಲ್ಲಿ ತಿಳಿಸಿರುವ ಪ್ರಕಾರ, "ಕುಮಾರ್ ಮತ್ತು ನನ್ನ ಮಗ ಶಶಿಕುಮಾರ್ ನಡುವೆ ತೋಟದ ಬಳಿ ಗಲಾಟೆ ನಡೆದಿತ್ತು. ಇದನ್ನೇ ಮನಸ್ಸಿನಲ್ಲಿಟ್ಟುಕೊಂಡಿರುವ ಕುಮಾರ್, ನಮ್ಮ ಕೃಷಿ ಹೊಂಡಕ್ಕೆ ಅಳವಡಿಸಿದ್ದ ಟಾರ್ಪಾಲಿನ್ ಅನ್ನು ಕತ್ತರಿಸಿದ್ದಾನೆ. ಅಷ್ಟೇ ಅಲ್ಲದೆ, ನಾವು ಬೆಳೆಗೆ ಡ್ರಿಪ್ ಪೈಪ್ಗಳ ಮೂಲಕ ರಸಗೊಬ್ಬರ ನೀಡುವುದಕ್ಕಾಗಿ ಡ್ರಮ್ನಲ್ಲಿ ತುಂಬಿಸಿಟ್ಟಿದ್ದ ನೀರಿಗೆ ರಾತ್ರಿ ವೇಳೆ ಕಳೆನಾಶಕ ಔಷಧಿಯನ್ನು ಬೆರೆಸುವ ಮೂಲಕ ಬೆಳೆಯನ್ನು ಸಂಪೂರ್ಣವಾಗಿ ಹಾಳು ಮಾಡುವ ಒಳಸಂಚು ರೂಪಿಸಿದ್ದಾನೆ" ಎಂದು ಆರೋಪಿಸಿದ್ದಾರೆ.

"ಟಾರ್ಪಾಲಿನ್ ಕತ್ತರಿಸಿರುವುದರಿಂದ ಕೃಷಿ ಹೊಂಡದಲ್ಲಿ ತುಂಬಿಸಿಕೊಂಡಿದ್ದ ನೀರೆಲ್ಲಾ ಇಂಗಿ ಹೋಗಿದೆ. ಇದರಿಂದ ಸುಮಾರು 48 ಸಾವಿರ ರೂಪಾಯಿ ನಷ್ಟವಾಗಿದೆ. ನನಗೆ ಮತ್ತು ನನ್ನ ಕುಟುಂಬಕ್ಕೆ ಪ್ರಾಣ ಬೆದರಿಕೆ ಹಾಕಿದ್ದಾನೆ. ಆತನ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕು" ಎಂದು ದೂರಿನಲ್ಲಿ ಮನವಿ ಮಾಡಿದ್ದಾರೆ.

# ಲೋಕಾಯುಕ್ತಕ್ಕೆ ದೂರು: ಉನ್ನತ ತನಿಖೆಗೆ ರಾಜ್ಯಪಾಲರಿಗೆ ಮನವಿ

ತುಮಕೂರು



ಕಳೆದ ಎರಡು ವರ್ಷಗಳಲ್ಲಿ ಜಿಲ್ಲಾಡಳಿತ ನಗರದಲ್ಲಿ ನಡೆಸಿದ ದಸರಾ ಉತ್ಸವಕ್ಕೆ ಸರ್ಕಾರದ ಅನುದಾನ, ಇಲಾಖೆ ಹಾಗೂ ಇತರೆ ದೇಣಿಗೆ ಹಾಗೂ ಖರ್ಚು ವೆಚ್ಚಗಳ ಬಗ್ಗೆ ಜಿಲ್ಲಾಡಳಿತವೇ ನೀಡಿದ ಮಾಹಿತಿಯ ದಾಖಲೆಗಳ ಪ್ರಕಾರ ಎರಡು ದಸರಾ ಉತ್ಸವಗಳಲ್ಲಿ 6ರಿಂದ 7 ಕೋಟಿ ರೂ.ಗಳ ಅವ್ಯವಹಾರ ನಡೆದಿರುವುದು ಕಂಡುಬಂದಿದೆ. ಈ ಬಗ್ಗೆ ಉನ್ನತ ಮಟ್ಟದ ತನಿಖೆಗೆ ಆದೇಶ ಮಾಡುವಂತೆ ರಾಜ್ಯಪಾಲರಿಗೆ ಮನವಿ ಮಾಡುವುದಾಗಿ ರಾಷ್ಟ್ರೀಯ ಮಾನವ ಪರಿಸರ ಸಂರಕ್ಷಣಾ ಪಡೆಯ ಅಧ್ಯಕ್ಷ ಜಿ.ಎಸ್. ಬಸವರಾಜು ಹೇಳಿದರು.

ಮಂಗಳವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ದಸರಾ ಉತ್ಸವಗಳ ಯಶಸ್ಸು ತಮಗೆ ಸೇರಿದ್ದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಜಿ. ಪರಮೇಶ್ವರ್ ಹೇಳಿದ್ದಾರೆ. ಬಹುಕೋಟಿ ರೂ.ಗಳ ಅವ್ಯವಹಾರದ ಹೊಣೆ ಹೊತ್ತು ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ನಿಯಮಗಳನ್ನು ಗಾಳಿಗೆ ತೂರು ಕೊಟೇಶನ್, ಟೆಂಡರ್ ಇಲ್ಲದೆ ಹಣ ಖರ್ಚು ಮಾಡಿ ಸರ್ಕಾರಕ್ಕೆ ವಂಚಿಸಿರುವ ಜಿಲ್ಲಾಧಿಕಾರಿ ಸೇರಿ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕ್ರಮ ತೆಗೆದುಕೊಳ್ಳಬೇಕು ಎಂದು ಹೇಳಿದರು.

2024ರ ದಸರಾ ಉತ್ಸವಕ್ಕೆ ರಾಜ್ಯ ಸರ್ಕಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಒಂದು ಕೋಟಿ ರೂ. ಅನುದಾನ ನೀಡಿದೆ. ಅದರಲ್ಲಿ 99 ಲಕ್ಷಕ್ಕೂ ಅಧಿಕ ಖರ್ಚು ಮಾಡಲಾಗಿದೆ ಎಂದು ಮಾಹಿತಿ ಹಕ್ಕಿನಡಿ ಜಿಲ್ಲಾಧಿಕಾರಿಗಳೆ ತಮಗೆ ಮಾಹಿತಿ ನೀಡಿದ್ದಾರೆ. ಐದು ಸಾವಿರಕ್ಕೂ ಅಧಿಕ ಹಣ ಖರ್ಚು ಮಾಡಲು ಕೊಟೇಶನ್ ಕರೆಯಬೇಕು, ಒಂದು ಲಕ್ಷಕ್ಕೂ ಹೆಚ್ಚಿನ ಖರ್ಚಿಗೆ ಟೆಂಡರ್ ಕರೆಯಬೇಕು. ಆದರೆ ಕೋಟ್ಯಾಂತರ ರೂ. ಖರ್ಚು ಮಾಡಿರುವ ದಸರಾ ಉತ್ಸವದಲ್ಲಿ ಯಾವ ಖರ್ಚಿಗೂ ಟೆಂಡರ್ ಅಥವಾ ಕೊಟೇಶನ್ ಕರೆಯದೇ ನಿಯಮ ಉಲ್ಲಂಘನೆ ಮಾಡಲಾಗಿದೆ. ವಿವಿಧ ಇಲಾಖೆಗಳಿಂದಲೂ ದಸರಾ ಉತ್ಸವಕ್ಕೆ ಲಕ್ಷಗಟ್ಟಲೆ ಸಾರ್ವಜನಿಕರ ಹಣ ಪಡೆಯಲಾಗಿದ್ದರೂ ಯಾವ ಇಲಾಖೆಯಲ್ಲೂ ನಿಯಮ ಪಾಲನೆ ಆಗಿಲ್ಲ ಎಂಬುದು ದಾಖಲೆಗಳಿಂದ ಗೊತ್ತಾಗುತ್ತದೆ ಎಂದ ಹೇಳಿದರು.

ಎರಡು ದಸರಾ ಉತ್ಸವಗಳಿಗೆ ನಗರಪಾಲಿಕೆಯಿಂದ ತಲಾ 50 ಲಕ್ಷ ರೂ. ಸಾರ್ವಜನಿಕರ ತೆರಿಗೆ ಹಣ ನೀಡಲಾಗಿದೆ. ಸಾರಿಗೆ ಇಲಾಖೆಯಿಂದ 10 ಲಕ್ಷ ರೂ. ತೋಟಗಾರಿಕೆ ಇಲಾಖೆ, ನಗರಾಭಿವೃದ್ಧಿ ಪ್ರಾಧಿಕಾರ ಮತ್ತಿತರ ಇಲಾಖೆಗಳಿಂದ ನಿಯಮಗಳನ್ನು ಗಾಳಿಗೆ ತೂರಿ ದಸರಾ ಉತ್ಸವಕ್ಕೆ ಹಣ ಪಡೆಯಲಾಗಿದೆ. ಜಿಲ್ಲಾಧಿಕಾರಿಗಳು ಸರ್ಕಾರಕ್ಕೆ ಸುಳ್ಳು ಲೆಕ್ಕ ಕೊಟ್ಟಿದ್ದಾರೆ. ಎರಡೂ ದಸರಾ ಉತ್ಸವಗಳಲ್ಲಿ 6–7 ಲಕ್ಷ ರೂ.ಗಳ ಅವ್ಯವಹಾರ ನಡೆದಿರುವುದು ಮೇಲ್ನೋಟಕ್ಕೆ ಕಂಡುಬಂದಿದೆ. ಅವ್ಯವಹಾರ ಮಾಡಲೆಂದೇ ದಸರಾ ಉತ್ಸವ ಮಾಡಲಾಗಿದೆ ಎಂಬ ಅನುಮಾನ ವ್ಯಕ್ತವಾಗಿದೆ. ಈ ಬಹು ಕೋಟಿ ರೂ. ಭ್ರಷ್ಟಾಚಾರದ ಬಗ್ಗೆ ಉನ್ನತ ತನಿಖೆ ನಡೆಸಲು ಆದೇಶ ನೀಡಬೇಕು ಎಂದು ರಾಜ್ಯಪಾಲರಿಗೆ ಮನವಿ ಮಾಡುವುದಾಗಿ ಜಿ.ಎಸ್. ಬಸವರಾಜು ಹೇಳಿದರು.

ರಾಷ್ಟ್ರೀಯ ಮಾನವ ಪರಿಸರ ಸಂರಕ್ಷಣಾ ಪಡೆಯ ಉಪಾಧ್ಯಕ್ಷ ಜಿ.ಕೆ. ಶ್ರೀನಿವಾಸ್, ಗೋಪಾಲಕೃಷ್ಣ ಪತ್ರಿಕಾಗೋಷ್ಠಿಯಲ್ಲಿದ್ದರು.

# ಪಿಂಚಣಿ, ರೇಷನ್ ರದ್ದುಗೆ ಮಾಜಿ ಶಾಸಕ ಆಕ್ರೋಶ

ಕೆಜಿಎಫ್



**ಬಿಪಿಎಲ್ ಕಾರ್ಡ್ ರದ್ದತಿಯಿಂದಾಗಿ ಬಡ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ, ಗಂಗಾ ಕಲ್ಯಾಣ ಯೋಜನೆ, ಆಯುಷ್ಮಾನ್ ಭಾರತ್ ಹೆಲ್ತ್ ಕಾರ್ಡ್ ಹಾಗೂ ಆಸ್ಪತ್ರೆ ಸೌಲಭ್ಯಗಳಂತಹ ಪ್ರಮುಖ ಯೋಜನೆಗಳು ಕೈತಪ್ಪುತ್ತಿವೆ. ರದ್ದುಗೊಳಿಸಲಾದ ಪಡಿತರ ಚೀಟಿಗಳನ್ನು ತಕ್ಷಣವೇ ಪುನರಾರಂಭಿಸಬೇಕು ಮತ್ತು ತಡೆಹಿಡಿದಿರುವ ಪಿಂಚಣಿಯನ್ನು ತಕ್ಷಣವೇ ಬಿಡುಗಡೆ ಮಾಡಬೇಕು. ಇಲ್ಲದಿದ್ದರೆ ಬಡವರ ಹಕ್ಕುಗಳಿಗಾಗಿ ಬೃಹತ್ ಮಟ್ಟದ ಪ್ರತಿಭಟನೆಯನ್ನು ಬಿಜೆಪಿ ವತಿಯಿಂದ ಹಮ್ಮಿಕೊಳ್ಳಲಾಗುವುದು ಎಂದು ವೈ. ಸಂಪಂಗಿ ಎಚ್ಚರಿಸಿದ್ದಾರೆ.**

ವಿಧಾನಸಭಾ ಕ್ಷೇತ್ರದಲ್ಲಿ ಯಾವುದೇ ಮುನ್ಸೂಚನೆ ನೀಡದೆ ಸಾವಿರಾರು ಬಡ ಕುಟುಂಬಗಳ ಪಿಂಚಣಿ ಹಾಗೂ ಪಡಿತರ ಚೀಟಿ (ರೇಷನ್‌ಕಾರ್ಡ್) ರದ್ದುಪಡಿಸಿರುವುದನ್ನು ಖಂಡಿಸಿ ಮಾಜಿ ಶಾಸಕ ವೈ. ಸಂಪಂಗಿ ಸರ್ಕಾರದ ಹಾಗೂ ಶಾಸಕಿ ರೂಪಕಲಾ ಶಶಿಧರ್ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನಗರದ ಲೋಕೋಪಯೋಗಿ ಅತಿಥಿ ಗೃಹದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕ್ಷೇತ್ರದ ಶಾಸಕರು ಮತ್ತು ಸ್ಥಳೀಯ ಆಡಳಿತದ ವೈಫಲ್ಯದಿಂದಾಗಿ ಇಂದು ಸಾವಿರಾರು ಬಡವರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಕಟುವಾಗಿ ಟೀಕಿಸಿದರು.

ಕೆಜಿಎಫ್ ಮೀಸಲು ಕ್ಷೇತ್ರವಾಗಿದ್ದರೂ ಇಲ್ಲಿನ ಆಡಳಿತದ ರಿಮೋಟ್ ಕಂಟ್ರೋಲ್ ಕೋಲಾರದಲ್ಲಿದೆ. ಇಲ್ಲಿ ಶಾಸಕರು ಕೇವಲ ಸಹಿ (ಸೈನ್) ಹಾಕಿದರೆ, ಅದಕ್ಕೆ ಸೀಲ್ ಹಾಕುವ ಕೆಲಸ ಕೋಲಾರದಲ್ಲಿ ಕುಳಿತ ಸೂಪರ್ ಶಾಸಕರಿಂದ ನಡೆಯುತ್ತಿದೆ ಎಂದು ಅವರು ವ್ಯಂಗ್ಯವಾಡಿದರು.

**34 ಸಾವಿರ ಬಡ ಕುಟುಂಬಗಳಿಗೆ ಸಂಕಷ್ಟ:** ಕ್ಷೇತ್ರದಲ್ಲಿ ಸುಮಾರು 14,000 ಅರ್ಹ ಫಲಾನುಭವಿಗಳ ಪಿಂಚಣಿ ತಡೆಹಿಡಿಯಲಾಗಿದೆ ಹಾಗೂ 4,000ಕ್ಕೂ ಹೆಚ್ಚು ಪಡಿತರ ಚೀಟಿಗಳನ್ನು ರದ್ದುಗೊಳಿಸಲಾಗಿದೆ. ಇದರಿಂದಾಗಿ ಹಿರಿಯ ನಾಗರಿಕರು, ವಿಧವೆಯರು, ಅಂಗವಿಕಲರು ಹಾಗೂ ಕಾರ್ಮಿಕರು ಸೇರಿದಂತೆ ಸುಮಾರು 34,000 ಬಡ ಕುಟುಂಬಗಳು ಸಂಕಷ್ಟ ಎದುರಿಸುತ್ತಿವೆ.

**ಆದಾಯ ಪ್ರಮಾಣ ಪತ್ರದ ಗೊಂದಲ:** ತಹಸೀಲ್ದಾರ್ ಅವರು 1.20 ಲಕ್ಷದವರೆಗೆ ಆದಾಯ ಪ್ರಮಾಣ ಪತ್ರ ನೀಡಿದ್ದರೂ, 32,000 ಗಡಿಯೊಳಗೆ ಮಾಶಾಸನ ನೀಡಲು ಯಾವ ಆದೇಶವಿದೆ ಎಂದು ಅವರು ಪ್ರಶ್ನಿಸಿದರು.

**ಇತರ ಯೋಜನೆಗಳಿಗೆ ಕೊಂಡಿ:** ಬಿಪಿಎಲ್ ಕಾರ್ಡ್ ಎನ್ನುವುದು ಕೇವಲ ಅಕ್ಕಿ ಪಡೆಯಲು ಮಾತ್ರವಲ್ಲದೆ, ಆರೋಗ್ಯ (ಆಯುಷ್ಮಾನ್ ಭಾರತ್) ಮತ್ತು ಶಿಕ್ಷಣ (ವಿದ್ಯಾರ್ಥಿವೇತನ) ಸೌಲಭ್ಯ ಪಡೆಯಲು ಮೂಲ ದಾಖಲೆಯಾಗಿದೆ. ಹೀಗಾಗಿ ಕಾರ್ಡ್ ರದ್ದತಿಯಿಂದಾಗಿ ಬಡ ಕುಟುಂಬಗಳು ಬಹುಮುಖಿ ನಷ್ಟ ಅನುಭವಿಸುತ್ತಿವೆ.

**ಸಂವಿಧಾನ ಆಶಯಕ್ಕೆ ಧಕ್ಕೆ:** ಸಂವಿಧಾನ ಶಿಲ್ಪಿ ಅಂಬೇಡ್ಕರ್ ಅವರು ಪ್ರಜಾಪ್ರಭುತ್ವ ವ್ಯವಸ್ಥೆ ಕಲ್ಪಿಸಲು ಚುನಾವಣೆ, ಮೀಸಲಾತಿ ನೀಡಿದ್ದು, ಇದಕ್ಕೆ ಶಾಸಕರು ತದ್ವಿರುದ್ಧವಾಗಿ ತನ್ನ ಅಧಿಕಾರವನ್ನು ದುರ್ಬಲ ಮಾಡಿಕೊಳ್ಳುತ್ತಿದ್ದಾರೆ ಎಂದು ಹೇಳಿದರು.

ಕೋಲಾರದ ಕಂಟ್ರೋಲ್‌ನಲ್ಲಿದ್ದಾರೆ, ಎನ್ನುವ ಆರೋಪದ ಮೂಲಕ ಸಂಪಂಗಿ ಅವರು ಕ್ಷೇತ್ರದ ಶಾಸಕರ ಸ್ವತಂತ್ರ ನಿರ್ಧಾರ ಕೈಗೊಳ್ಳುವ ಸಾಮರ್ಥ್ಯವನ್ನು ಪ್ರಶ್ನಿಸಿದ್ದಾರೆ.

ಕೆಜಿಎಫ್ ಬಿಜೆಪಿ ನಗರ ಘಟಕದ ಅಧ್ಯಕ್ಷ ಸುರೇಶ್ ಬಾಬು, ಗ್ರಾಮಾಂತರ ಅಧ್ಯಕ್ಷ ಲಕ್ಷ್ಮೀನಾರಾಯಣ ಶರ್ಮ, ನಗರಸಭೆ ಮಾಜಿ ಸದಸ್ಯ ಬಂಡಿ ವೆಂಕಟೇಶ್, ಬಾಬಿ ಸುರೇಶ್, ಗ್ರಾಪಂ ಮಾಜಿ ಅಧ್ಯಕ್ಷ ಸುನಿಲ್ ಕುಮಾರ್, ಮಾಜಿ ಸದಸ್ಯ ಪ್ರಸಾದ್, ನಾರಾಯಣಸ್ವಾಮಿ, ಟಿಎಪಿಸಿಎಂಎಸ್ ನಿರ್ದೇಶಕ ಪುರುಷೋತ್ತಮ್, ಮುಖಂಡರಾದ ನ್ಯಾನೇಶ್, ರಮೇಶ್, ಗಂಗಾಧರ್, ಅಮರೇಶ, ಮಂಜು ಪಂಡು, ಕೇಶವ, ಅಪ್ಪಿ, ಉಪಸ್ಥಿತರಿದ್ದರು.

# 'ಸಂಘಟಿತರಾಗಿ ಶಿಕ್ಷಣ–ರಾಜಕೀಯದಲ್ಲಿ ಮುನ್ನಡೆಯಿರಿ'

ಮಾಲೂರು



ಜ್ಯೋತಿನಗರ ವೈಶ್ಯ ಗಾಣಿಗ ಸಮಾಜದವರು ಒಗ್ಗಟ್ಟಾಗುವುದರ ಮೂಲಕ ರಾಜಕೀಯ ಶೈಕ್ಷಣಿಕ ಸಾಮಾಜಿಕ ಮತ್ತು ಆರ್ಥಿಕವಾಗಿ ಪ್ರಗತಿ ಸಾಧಿಸುವುದರ ಮೂಲಕ ಸಮಾಜದ ಮುಖ್ಯ ವಾಹಿನಿಗೆ ಬರುವಂತೆ ಅಖಿಲ ಕರ್ನಾಟಕ ಜ್ಯೋತಿನಗರ ವೈಶ್ಯ ಗಾಣಿಗರ ಸಂಘದ ಪೋಷಕ ವೇಣುಗೋಪಾಲ್ ಹೇಳಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಗ್ರಾಮದ ನಂದ ನಾಣಿ ಬಡಾವಣೆಯ ವೈಕುಂತ ರಾಣಾ ನಿಲಯದಲ್ಲಿ ಇತ್ತೀಚಿಗೆ ಕೋಲಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಕೆ ಪ್ರಹ್ಲಾದ ರಾವ್ ರವರ ಸವಿನೆನಪಿನಲ್ಲಿ ಜಿಲ್ಲಾ ಪ್ರಶಸ್ತಿ ಪಡೆದ ಎಸ್.ನಾರಾಯಣಸ್ವಾಮಿ ಹಾಗೂ ಜಿಲ್ಲಾ ಉಪಾಧ್ಯಕ್ಷರಾಗಿ ಆಯ್ಕೆಯಾದ ಮುಳಬಾಗಿಲು ಪ್ರಕಾಶ ಅವರನ್ನು ಅಭಿನಂದಿಸಿ ಮಾತನಾಡಿದರು.

ಜ್ಯೋತಿನಗರ ವೈಶ್ಯ ಗಾಣಿಗ ಸಮಾಜವು ಹಿಂದುಳಿದ ವರ್ಗಗಳಲ್ಲಿ ಒಂದಾದ ಬಿಸಿಎಂಎ ವ್ಯಾಪ್ತಿಯಲ್ಲಿ ಬರುವ ಸಮಾಜದವರು ಶೈಕ್ಷಣಿಕ ಸಾಮಾಜಿಕ ಆರ್ಥಿಕವಾಗಿ ತೀರ ಹಿಂದುಳಿದ ಸಮಾಜವಾಗಿದೆ ನಮ್ಮ ಸಮಾಜದವರು ಬೆಂಗಳೂರು ನಗರದ ಹೃದಯ ಭಾಗದಲ್ಲಿ ಜನೋಪಕಾರಿ ದೊಡ್ಡಣ್ಣಶೆಟ್ಟಿ ಅವರಿಂದ ಸ್ಥಾಪಿತವಾಗಿರುವ ಹಾಸ್ಟೆಲ್ ಹಾಗೂ ಶಿಕ್ಷಣ ಸಂಸ್ಥೆಯಲ್ಲಿ ಶಿಕ್ಷಣವನ್ನು ಪಡೆದು ಕೆಲವರು ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸೇವೆಯನ್ನು ಸಲ್ಲಿಸುತ್ತಿದ್ದಾರೆ ಜನೋಪಕಾರಿ ದೊಡ್ಡಣ್ಣ ಶೆಟ್ಟಿಯವರು ಸಮಾಜದ ದೈವ ಸ್ವರೂಪಿಯಾಗಿ ಅನ್ನದಾತರು ವಿದ್ಯಾದಾತರಾಗಿದ್ದಾರೆ ಅವರನ್ನು ಸ್ಮರಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಹಾಗೂ ಅಖಿಲ ಕರ್ನಾಟಕ ಗಾಣಿಗರ ಸಂಘದ ಮಾರ್ಗದರ್ಶಿ ಹಾಗೂ ಪೋಷಕರಾದ ಜಿಎಸ್ ಅಮರನಾಥ್ ಮಾತನಾಡಿ ನಮ್ಮ ಜ್ಯೋತಿನಗರ ವೈಶ್ಯ ಗಾಣಿಗ ಸಮಾಜ ಆರ್ಥಿಕವಾಗಿ ಹಿಂದುಳಿದಿದ್ದರೂ ಸಹ ಪೋಷಕರು ತಮ್ಮ ಮಕ್ಕಳಿಗೆ ಉನ್ನತ ಮಟ್ಟದ ಶಿಕ್ಷಣ ಕೊಡಿಸುವಲ್ಲಿ ಯಶಸ್ವಿಯಾಗಿದ್ದಾರೆ ಪೋಷಕರು ತಮ್ಮ ಮಕ್ಕಳನ್ನು ಐಎಎಸ್ ಐಪಿಎಸ್ ಕೆಎಎಸ್ ಇಂಥರೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬರೆಯುವಂತೆ ಪ್ರೋತ್ಸಾಹಿಸಬೇಕು ನಮ್ಮ ಸಮಾಜದಲ್ಲಿನ ಪತ್ರಕರ್ತರು ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸುವುದರ ಮೂಲಕ ಸಮಾಜದಲ್ಲಿ ಜನರ ಪ್ರೀತಿ ವಿಶ್ವಾಸಗಳಿಸಿದ್ದಾರೆ ಕಾರ್ಯನಿರತ ಪತ್ರಕರ್ತರ ಸಂಘವು ಉತ್ತಮ ಪತ್ರಕರ್ತರನ್ನು ಗುರುತಿಸಿ ಪ್ರಶಸ್ತಿ ನೀಡಿ ಗೌರವಿಸುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದರು.

ಈ ವೇಳೆ ಪಿಜಿ ವಿಜಯ್, ಟಿ.ಎಸ್ ರಮೇಶ್, ಪ್ರಧಾನ ಕಾರ್ಯದರ್ಶಿ ಮೋಹಿತ್, ಜಿಎನ್ ರಮೇಶ್, ರವಿ, ಪ್ರಕಾಶ್, ರಾಮಕೃಷ್ಣ, ಮುರಳಿಕೃಷ್ಣ, ಅರುಣಾಚಲಂ, ಆವಣಿ ಬಾಬು, ಷಣ್ಮುಖ, ಶಶಿಕುಮಾರ್, ಬಾಲಾಜಿ, ಕೌಶಿಕ್ ವಿ ಸಿ ಮೋಹನ್, ವೆಂಕಟರಮ್ಮೆ ಶೆಟ್ಟಿ, ರಘು, ರಮೇಶ್, ದೇವಿ ಇನ್ನಿತರರು ಹಾಜರಿದ್ದರು.

# ಬಂಗಾರಪೇಟೆ ರೈಲ್ವೆ ಮೇಲುಸೇತುವೆ ಶೀಘ್ರ ಲೋಕಾರ್ಪಣೆಗೆ ಆಗ್ರಹ

ಬಂಗಾರಪೇಟೆ



ನಗರದಲ್ಲಿ ನಿರ್ಮಾಣಗೊಂಡಿರುವ ಬೂದಿಕೋಟೆ ರಸ್ತೆಯ ನೂತನ ರೈಲ್ವೆ ಮೇಲುಸೇತುವೆ ಕಾಮಗಾರಿ ಪೂರ್ಣ ಗೊಂಡಿರುವ ಹಿನ್ನೆಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಿದ ಕೋಲಾರದ ಮಾಜಿ ಸಂಸದ ಎಸ್. ಮುನಿಸ್ವಾಮಿ, ಸೇತುವೆಯನ್ನು ಶೀಘ್ರ ಸಾರ್ವಜನಿಕರ ಸೇವೆಗೆ ಲೋಕಾರ್ಪಣೆ ಮಾಡಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು.

ಸಾರ್ವಜನಿಕರ ಬಹುಕಾಲದ ಬೇಡಿಕೆಯನ್ನು ಮನಗಂಡು ತಾವು ಸಂಸದರಾಗಿದ್ದ ಅವಧಿಯಲ್ಲಿ ಅಂದಿನ ರೈಲ್ವೆ ಸಚಿವರಿಗೆ ವಿಡಿಯೋಕಾಲ್ ಮೂಲಕ ಸ್ಥಳದ ಸಮಸ್ಯೆಯನ್ನು ತೋರಿಸಿ ಸೇತುವೆಯ ಅಗತ್ಯವನ್ನು ಮನವರಿಕೆ ಮಾಡಿಕೊಟ್ಟಿದ್ದಾಗಿ ಅವರು ಹೇಳಿದರು.

ಬಳಿಕ ರೈಲ್ವೆಯ ಹಿರಿಯ ಅಧಿಕಾರಿಗಳನ್ನು ಸ್ಥಳ ಪರಿಶೀಲನೆಗೆ ಕರೆಸಿ, ಯೋಜನೆಗೆ ಅನುಮೋದನೆ ಪಡೆದು ಗುದ್ದಲಿ ಪೂಜೆ ನೆರವೇರಿಸುವ ಮೂಲಕ ಕಾಮಗಾರಿಗೆ ಚಾಲನೆ ನೀಡಲಾಗಿತ್ತು ಎಂದು ವಿವರಿಸಿದರು.

ರಸ್ತೆ ಅಗಲೀಕರಣ ವೇಳೆ ರಸ್ತೆ ಬದಿಯ ಮನೆಗಳನ್ನು ತೆರವುಗೊಳಿಸಲು ಗುರುತು ಹಾಕಲಾಗಿದ್ದರೂ, ಸಾರ್ವಜನಿಕರಿಗೆ ತೊಂದರೆ ಯಾಗದಂತೆ ರೈಲ್ವೆ ಇಲಾಖೆಯ ಕಾಂಪೌಂಡ್ ಗೋಡೆಯನ್ನು ಹಿಂದಕ್ಕೆ ಸ್ಥಳಾಂತರಿಸಿ ರಸ್ತೆ ಅಗಲೀಕರಣ ನಡೆಸುವ ಮೂಲಕ ಅನೇಕ ಕುಟುಂಬಗಳ ಮನೆಗಳನ್ನು ರಕ್ಷಿಸಲಾಗಿದೆ ಎಂದು ತಿಳಿಸಿದರು.

ಪ್ರಸ್ತುತ ರೈಲ್ವೆ ಸಚಿವ ವಿ. ಸೋಮಣ್ಣ ಹಾಗೂ ಹಾಲಿ ಸಂಸದ ಮಲ್ಲೇಶ್ ಬಾಬು ಅವರು ಪ್ರೋಟೋಕಾಲ್ ಮತ್ತು ಕಾನೂನು ಕ್ರಮಗಳನ್ನು ಅನುಸರಿಸಿ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಿರುವುದಕ್ಕೆ ಅಭಿನಂದನೆ ಸಲ್ಲಿಸಿದ ಅವರು, ಸೇತುವೆಯನ್ನು ತಕ್ಷಣ ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸುವಂತೆ ಮನವಿ ಮಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಹಾಗೂ ಬಂಗಾರಪೇಟೆಯಲ್ಲಿ ಅದೇ ಪಕ್ಷದ ಶಾಸಕರು ಇರುವುದರಿಂದ, ಪಿಡಬ್ಲ್ಯುಡಿ ಇಲಾಖೆಯ ಮೂಲಕ ಸೇತುವೆಯ ಸುರಕ್ಷತಾ ಕ್ರಮಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕೆಂದು ಆಗ್ರಹಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕೋಲಾರ ಲೋಕಸಭಾ ಕ್ಷೇತ್ರಕ್ಕೆ ಸುಮಾರು 600 ಕೋಟಿ ಅನುದಾನ ಬಿಡುಗಡೆಯಾಗಿದ್ದು, ಜಿಲ್ಲೆಯ ರೈಲ್ವೆ ನಿಲ್ದಾಣಗಳ ಮೇಲ್ದರ್ಜೆಗೇರಿಕೆ ಹಾಗೂ ಅಗತ್ಯವಿರುವ ಕಡೆಗಳಲ್ಲಿ ಮೇಲ್‌ಸೇತುವೆಗಳ ನಿರ್ಮಾಣಕ್ಕೆ ನೆರವಾಗಿದೆ ಎಂದು ಹೇಳಿದರು. ಈ ಅಭಿವೃದ್ಧಿಗೆ ಸಹಕರಿಸಿದ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ದಿವಂಗತ ರೈಲ್ವೆ ಸಚಿವ ಸುರೇಶ್ ಅಂಗಡಿ ಹಾಗೂ ಹಾಲಿ ಸಚಿವ ವಿ. ಸೋಮಣ್ಣ ಅವರಿಗೆ ಜಿಲ್ಲೆಯ ಜನತೆಯ ಪರವಾಗಿ ಕೃತಜ್ಞತೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ಕಪಾಲಿ ಶಂಕರ್, ಜೀವನ್ ರೆಡ್ಡಿ, ಕುಪ್ಪನಹಳ್ಳಿ ನಾರಾಯಣಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕ ವಿತರಣೆ

ಮಾಲೂರು

ಗ್ರಾಮೀಣ ಭಾಗದ ಸರ್ಕಾರಿ ಶಾಲಾ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಸರ್ಕಾರದ ಯೋಜನೆಗಳೊಂದಿಗೆ ದಾನಿಗಳು ಹಾಗೂ ಸಂಘ–ಸಂಸ್ಥೆಗಳ ಸಹಕಾರವೂ ಅಗತ್ಯವಾಗಿದೆ ಎಂದು ಸಮಾಜ ಸೇವಕ ಮಾದನಹಟ್ಟಿ ಎಂ.ಶಿವಕುಮಾರ್ ಹೇಳಿದರು.

ನಗರದ ಕೆಪಿಎಸ್ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಬಾಲಕಿಯರ ಶಾಲೆಯಲ್ಲಿ ಚಾಲನೆ ನೀಡುವ ಮೂಲಕ ಪಟಾಲಮ್ಮ ಸರ್ಕಾರಿ ಶಾಲೆ, ಲೋಕೋಪಯೋಗಿ ಸರ್ಕಾರಿ ಶಾಲೆ, ಕುಂಬಾರ ಪೇಟೆ ಸರ್ಕಾರಿ ಹಿರಿಯ ಪ್ರಾಥಮಿಕ ಬಾಲಕರ ಶಾಲೆ ಹಾಗೂ ಧರ್ಮರಾಯಸ್ವಾಮಿ ಸರ್ಕಾರಿ ಶಾಲೆಗಳಲ್ಲಿ ಅದ್ವಿಕ್ ಫೌಂಡೇಶನ್ ಮತ್ತು ಶಿವು ಎಂಟರ್‌ಪ್ರೈಸಸ್ ವತಿಯಿಂದ ವಿದ್ಯಾರ್ಥಿಗಳಿಗೆ ಉಚಿತ ನೋಟ್ ಪುಸ್ತಕಗಳನ್ನು ವಿತರಿಸಿ ಮಾತನಾಡಿದರು.

ತಾಲ್ಲೂಕಿನಾದ್ಯಂತ ಸುಮಾರು 25 ಸಾವಿರ ಉಚಿತ ನೋಟ್ ಪುಸ್ತಕಗಳನ್ನು ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ವಿತರಿಸುವ ಅಭಿಯಾನ ಆರಂಭಿಸಲಾಗಿದ್ದು, ಶಿಕ್ಷಣದ ಜೊತೆಗೆ ದೇವಾಲಯಗಳ ಅಭಿವೃದ್ಧಿ, ಆರೋಗ್ಯ ಹಾಗೂ ಇತರ ಸಾಮಾಜಿಕ ಸೇವೆಗಳನ್ನೂ ಸಂಸ್ಥೆ ನಿರಂತರವಾಗಿ ಕೈಗೊಳ್ಳುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬಿಇಒ ಬಿ.ಪಿ. ಕೆಂಪಯ್ಯ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸಿ.ಎಂ.ನಾರಾಯಣಸ್ವಾಮಿ, ಸಿ.ಆರ್.ಪಿ.ಗಳಾದ ಮುನಿರಾಜು, ನಾಗರಾಜ್, ಎಸ್.ಮೋಹನ್, ಮುಖಂಡ ಇಂದುಮಂಗಲ ಲೋಕೇಶ್, ಶಿಕ್ಷಕರಾದ ಮಂಜುಳ, ಸುಧಾಕರ್, ಪದ್ಮ, ಅಶೋಕ್ ಬಾಬು, ನಾರಾಯಣಪ್ಪ, ಪಿಳ್ಳಪ್ಪ, ವಿಜಯಕುಮಾರ್, ವೀಣಾ, ಶಶಿಕುಮಾರ್, ಅನಿತ, ಗೀತಾ, ಕವಿತ, ಸೇರಿದಂತೆ ವಿವಿಧ ಶಾಲೆಯ ಶಿಕ್ಷಕ ವೃಂದ ಹಾಜರಿದ್ದರು.

# ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘಕ್ಕೆ ಆ. 2ರಂದು ಚುನಾವಣೆ

ದೊಡ್ಡಬಳ್ಳಾಪುರ

ತೂಬಗೆರೆ ವಿವಿಧೋದ್ದೇಶ ಪ್ರಾರ್ಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಮುಂದಿನ ಐದು ವರ್ಷ ಅವಧಿಗೆ ಆಗಸ್ಟ್ 2 ರಂದು ತೇರಿನ ಬೀದಿಯಲ್ಲಿರುವ ಸಮುದಾಯ ಭವನದಲ್ಲಿ ಚುನಾವಣೆ ನಡೆಯಲಿದೆ ಎಂದು ಚುನಾವಣಾಧಿಕಾರಿ ತಿಳಿಸಿದ್ದಾರೆ.

ಆಗಸ್ಟ್ 2 ರಂದು ನಡೆಯಲಿರುವ ಚುನಾವಣೆಗೆ ಅಭ್ಯರ್ಥಿಗಳು ಜುಲೈ 24 ರಿಂದ ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 3 ಗಂಟೆವರೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಚುನಾವಣೆಯಲ್ಲಿ ಸ್ಪರ್ಧಿಸುವ ಉಮೇದುವಾರರು ಉಮೇದುವಾರಿಕೆ ಅರ್ಜಿಗಳನ್ನು ಸಲ್ಲಿಸಲು ಜುಲೈ 25 ಕಡೆಯ ದಿನಾಂಕವಾಗಿರುತ್ತದೆ. ಜುಲೈ 26ರಂದು ನಾಮಪತ್ರಗಳ ಪರಿಶೀಲನೆ ನಡೆಯುತ್ತದೆ. ಅಂದೆ ಅಭ್ಯರ್ಥಿಗಳನ್ನು ಪ್ರಕಟ ಮಾಡಲಾಗುತ್ತದೆ. ನಾಮಪತ್ರಗಳನ್ನು ವಾಪಸ್ ಪಡೆಯಲು ಜುಲೈ 27 ಕೊನೆಯ ದಿನವಾಗಿರುತ್ತದೆ. ಅಂದೆ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆ ಮಾಡಿ ಚಿಹ್ನೆಗಳನ್ನು ಮಧ್ಯಾಹ್ನ 3 ಗಂಟೆಗೆ ಸಂಘದ ಕಚೇರಿಯಲ್ಲಿ ಸದಸ್ಯರಿಗೆ ಪ್ರಕಟಣೆ ಮಾಡಲಾಗುತ್ತದೆ.

ಆಗಸ್ಟ್ 2 ರಂದು ಚುನಾವಣೆ ನಡೆಯಲಿದ್ದು ಅಂದೆ ಮತದಾನ ಎಣಿಕೆ ಕಾರ್ಯ ನಡೆಯಲಿದೆ ಎಂದು ರಿಟರ್ನಿಂಗ್ ಆಫೀಸರ್ ನಾಗವೇಣಿ ಕೆ. ಎನ್ ತಿಳಿಸಿದ್ದಾರೆ.

## ಸದ್ಗುರುವಿನ ಮಾರ್ಗದರ್ಶನವು ದೀಪದಂತೆ ಅತ್ಯಗತ್ಯ



ವಿಜಯಪುರ

ಮಾನವನ ಜೀವನವು ಕತ್ತಲೆಯಲ್ಲಿ ದಾರಿ ಹುಡುಕುವ ಯಾತ್ರೆಯಿದ್ದಂತೆ. ಈ ಯಾತ್ರೆಯಲ್ಲಿ ಸದ್ಗುರುವಿನ ಮಾರ್ಗದರ್ಶನವು ದೀಪದಂತೆ ಅತ್ಯಗತ್ಯ ಎಂದು ಸಂಗಮ ಶಾಂತಾಶ್ರಮದ ಪೀಠಾಧಿಪತಿ ಜೆ.ಎಸ್.ರಾಮಚಂದ್ರಪ್ಪ ಹೇಳಿದರು.

ಪಟ್ಟಣದ ಕೋಟೆ ಬೀದಿಯಲ್ಲಿರುವ ಶ್ರೀಚನ್ನಕೇಶವಸ್ವಾಮಿ ದೇವಾಲಯದ ಆವರಣದಲ್ಲಿ ಶ್ರೀಕೃಷ್ಣ ಯತೀಂದ್ರ ಸತ್ಸಂಗ ಸೇವಾ ಟ್ರಸ್ಟ್, ವಿಜಯಪುರ ವತಿಯಿಂದ ಶ್ರೀಮದ್ ಭಗವದ್ಗೀತಾ ಪಾರಾಯಣ ಮತ್ತು ಕೈವಾರ ಯೋಗಿ ನಾರೇಯಣ ಯತೀಂದ್ರರ ಕನಕ ಪುರಂದರ ಗೀತ ತತ್ವಾಮೃತ ರಸಧಾರೆಯ 253 ನೇ ಕಾರ್ಯಕ್ರಮ ಹಾಗೂ ಶ್ರೀಕೃಷ್ಣ ಮಾಸಿಕ ದ್ವಾದಶಿ ವಿಚಾರಧಾರೆ ಗೋಷ್ಠಿಯ 204ನೇ ಕಾರ್ಯಕ್ರಮದಲ್ಲಿ ಮಾತನಾಡಿದರು.

ಪುಸ್ತಕಗಳು ಮಾಹಿತಿ ನೀಡಬಹುದು, ಆದರೆ ಅನುಭವದಿಂದ ಬಂದ ಆತ್ಮಜ್ಞಾನವನ್ನು ನೀಡುವವರು ಸದ್ಗುರು ಮಾತ್ರ. ಅವರು ನಮ್ಮ ಅಹಂಕಾರವನ್ನು ಅಳಿಸಿ, ಸತ್ಯದ ಹಾದಿಯನ್ನು ತೋರಿಸುತ್ತಾರೆ. ಸಂಶಯ, ಭಯ, ದುಃಖಗಳಲ್ಲಿ ಸಿಲುಕಿದಾಗ ಗುರುವಿನ ಒಂದು ಮಾತು ನಮಗೆ ಧೈರ್ಯ, ಶಾಂತಿ ನೀಡುತ್ತದೆ. ಅವರು ಕರ್ಮ, ಭಕ್ತಿ ಮತ್ತು ಜ್ಞಾನದ ಸಮತೋಲನವನ್ನು ಕಲಿಸುತ್ತಾರೆ. ಗುರುವಿಲ್ಲದ ವಿದ್ಯೆ ದಿಕ್ಕಿಲ್ಲದ ದೋಣಿಯಂತೆ. ಆದ್ದರಿಂದ ಪ್ರತಿಯೊಬ್ಬ ಮಾನವನ ಉದ್ಧಾರಕ್ಕೆ ಸದ್ಗುರುವಿನ ಮಾರ್ಗದರ್ಶನವೇ ಜೀವನದ ದಿಕ್ಸೂಚಿ ಎಂದರು.

ಜಂಗಮಕೋಟೆಯ ರಾಜಗೋಪಾಲಸ್ವಾಮೀಜಿಯವರ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ, ಗುರು ಇಲ್ಲದೆ ಜೀವನದಲ್ಲಿ ಮುಕ್ತಿ ಸಾಧ್ಯವಿಲ್ಲ. ವ್ಯಾಸರು ಜಗತ್ತಿಗೆ ನೀಡಿದ ಅತಿ ದೊಡ್ಡ ಕೊಡುಗೆ ವೇದಗಳ ವಿಭಜನೆ ಮತ್ತು ಭಗವದ್ಗೀತೆ. ಸದ್ಗುರುವಿನ ಅನುಗ್ರಹದಿಂದ ಮಾತ್ರ ಶಿಷ್ಯನ ಅಜ್ಞಾನ ನಾಶವಾಗುತ್ತದೆ ಎಂದು ತಿಳಿಸಿದರು. ಎಂ.ವಿ.ನಾಯ್ಡು ತಂಡದಿಂದ ಭಕ್ತಿಗೀತೆಗಳ ಗಾಯನ ಕಾರ್ಯಕ್ರಮ ಜರುಗಿತು.

ವಿಜಯಪುರ ಚನ್ನಕೇಶವಸ್ವಾಮಿ ದೇವಾಲಯದ ವ್ಯವಸ್ಥಾಪನಾ ಸಮಿತಿಯ ಅಧ್ಯಕ್ಷರು, ಸದಸ್ಯರು, ವಿ.ಎನ್.ವೆಂಕಟೇಶ್, ಆರ್. ಮುನಿರಾಜು, ರಮೇಶ್ ಸ್ವಾಮಿ, ಮಂಜುಳಾ ವೆಂಕಟೇಶ್, ನಾಗವೇಣಿ, ಮುಂತಾದವರು ಹಾಜರಿದ್ದರು.

# ಜೂಜು: 6 ಜನ ಬಂಧನ

ವೈ.ಎನ್.ಹೊಸಕೋಟೆ

ಹೋಬಳಿಯ ವೈ.ಎನ್.ಹಳ್ಳಿ ವ್ಯಾಪ್ತಿಯ ಬೆಟ್ಟದ ತಪ್ಪಲಿನಲ್ಲಿ ಜೂಜಾಟ ಆಡುತ್ತಿದ್ದವರ ಮೇಲೆ ದಾಳಿ ನಡೆಸಿರುವ ಪೋಲೀಸರು ಆರು ಜನರನ್ನು ಬಂದಿಸಿದ್ದಾರೆ.

ಬಂದಿತರಿಂದ 2200 ರೂಗಳನ್ನು ವಶಕ್ಕೆ ಪಡೆದುಕೊಂಡು ಪ್ರಕರಣ ದಾಖಲಿಸಿದ್ದಾರೆ.



ಎಐಸಿಸಿ ಅಧ್ಯಕ್ಷರು ಹಾಗೂ ರಾಜ್ಯಸಭೆ ವಿರೋಧ ಪಕ್ಷದ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಅವರ ಜನ್ಮದಿನದ ಹಿನ್ನೆಲೆಯಲ್ಲಿ ಅವರ ದೆಹಲಿಯ ನಿವಾಸಕ್ಕೆ ತೆರಳಿ ಸಿಎಂ ಡಿ.ಕೆ.ಶಿವಕುಮಾರ್ ಅವರು ಹೂಗುಚ್ಛ ನೀಡಿ ಶುಭಕೋರಿದರು.

